ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 278
28–4–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 278

## ಜಮ್ಮು–ಕಾಶ್ಮೀರದ ಪ್ರಗತಿ ಶತ್ರುಗಳ ಕಣ್ಣು ಕೆಂಪಗಾಗಿಸಿದ್ದು, ನಾಶಪಡಿಸಲು ಹತಾಶ ಯತ್ನ ನಡೆಸುತ್ತಿದ್ದಾರೆ : ಪ್ರಧಾನಿ ಮೋದಿ

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದ ಪ್ರಗತಿ ಶತ್ರುಗಳ ಕಣ್ಣು ಕೆಂಪಗಾಗುವಂತೆ ಮಾಡಿದ್ದು, ಇದರಿಂದಾಗಿ ನಾಶಪಡಿಸಲು ಹತಾಶ ಪ್ರಯತ್ನ ನಡೆಸುತ್ತಿದ್ದಾರೆಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಭಾನುವಾರ ಹೇಳಿದರು.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭೀಕರ ದಾಳಿಯನ್ನು ತಮ್ಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಉಲ್ಲೇಖಿಸಿದ ಪ್ರಧಾನಿ ಮೋದಿಯವರು, ಉಗ್ರರ ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ.

ಇದೇ ವೇಳೆ ಪಹಲ್ಗಾಮ್ ಉಗ್ರ ದಾಳಿಯಲ್ಲಿ ಮೃತಪಟ್ಟವರಿಗೆ ನ್ಯಾಯ ಸಿಗುತ್ತೆ, ಉಗ್ರರಿಗೆ ಕಠಿಣ ಶಿಕ್ಷೆ ಕೊಟ್ಟೇ ಕೊಡುತ್ತೇವೆಂದು ಭರವಸೆ ನೀಡಿದಿದ್ದಾರೆ.

ಕಾಶ್ಮೀರದ ಪ್ರಗತಿಯಿಂದ ಕೆಲವು ಶತ್ರುಗಳು ಸಂತೋಷವಾಗಿಲ್ಲ. ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಘಟನೆಯು ದೇಶದ ಪ್ರತಿಯೊಬ್ಬ ನಾಗರಿಕನನ್ನು ದುಃಖಿತನನ್ನಾಗಿ ಮಾಡಿದೆ. ಈ ಭಯೋತ್ಪಾದಕ ದಾಳಿಯ ಚಿತ್ರಗಳನ್ನು ನೋಡಿದ ನಂತರ ಪ್ರತಿಯೊಬ್ಬ ಭಾರತೀಯನ ರಕ್ತ ಕುದಿಯುತ್ತಿದೆ ಎಂದು ನನಗೆ ತಿಳಿದಿದೆ. ಪಹಲ್ಗಾಮ್‌ನಲ್ಲಿ ನಡೆದ ಈ ದಾಳಿಯು ಭಯೋತ್ಪಾದನಾ ಚಟುವಟಿಕೆಯ ಹತಾಶೆಯನ್ನು ತೋರಿಸುತ್ತದೆ, ಅವರ ಹೇಡಿತನವನ್ನು ತೋರಿಸುತ್ತದೆ.

ದೇಶದ ಏಕತೆ, 140 ಕೋಟಿ ಭಾರತೀಯರ ಒಗ್ಗಟ್ಟು, ಭಯೋತ್ಪಾದನೆಯ ವಿರುದ್ಧದ ಈ ಯುದ್ಧದಲ್ಲಿ ನಮ್ಮ ದೊಡ್ಡ ಶಕ್ತಿಯಾಗಿದೆ. ಈಗ ತಾನೇ ಎಲ್ಲಾ ವಿಚಾರಗಳಲ್ಲೂ ಸಮೃದ್ಧವಾಗಿರುವ ಕಾಶ್ಮೀರವನ್ನು

ಮನ್ ಕಿ ಬಾತ್



ಹಳೆಯ ಪರಿಸ್ಥಿತಿಗೆ ತಂದು ನಿಲ್ಲಿಸಲು ಕೆಲವರು ಪ್ರಯತ್ನಿಸುತ್ತಿದ್ದಾರೆ.

ಕಾಶ್ಮೀರದಲ್ಲಿ ಶಾಂತಿ ಮರಳುತ್ತಿದ್ದ ಸಮಯದಲ್ಲಿ, ಶಾಲಾ ಕಾಲೇಜುಗಳಲ್ಲಿ ಹುರುಪು ತುಂಬಿತ್ತು, ನಿರ್ಮಾಣ ಕಾರ್ಯಗಳು ಅಭೂತಪೂರ್ವ ವೇಗವನ್ನು ಪಡೆದುಕೊಂಡಿದ್ದವು, ಪ್ರಜಾಪ್ರಭುತ್ವ ಬಲಗೊಳ್ಳುತ್ತಿತ್ತುಯ ಪ್ರವಾಸಿಗರ ಸಂಖ್ಯೆಯಲ್ಲಿ ದಾಖಲೆಯ ಏರಿಕೆ ಕಂಡುಬಂದಿದೆ, ಜನರ ಆದಾಯ ಹೆಚ್ಚುತ್ತಿದೆ, ಯುವಕರಿಗೆ ಹೊಸ ಅವಕಾಶಗಳು ಸೃಷ್ಟಿಯಾಗುತ್ತಿವೆ. ಆದರೆ, ಈ ಬೆಳವಣಿಗೆ ಶತ್ರುಗಳ ಕಣ್ಣು ಕೆಂಪಗಾಗಿಸಿದೆ. ಹೀಗಾಗಿ ದಾಳಿ ಮೂಲಕ ಹತಾಶ ಪ್ರಯತ್ನ ಮಾಡಿದ್ದಾರೆ.

ಏಪ್ರಿಲ್ 22 ರಂದು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ಘಟನೆಯು ದೇಶದ ಪ್ರತಿಯೊಬ್ಬ ನಾಗರಿಕನನ್ನು ದುಃಖಿತನನ್ನಾಗಿ ಮಾಡಿದೆ. ಪ್ರತಿಯೊಬ್ಬ ಭಾರತೀಯನೂ ಸಂತ್ರಸ್ತ ಕುಟುಂಬಗಳ ಬಗ್ಗೆ ಆಳವಾದ ಸಹಾನುಭೂತಿಯನ್ನು ಹೊಂದಿದ್ದಾರೆ. ಈ ಭಯೋತ್ಪಾದಕ ದಾಳಿಯ ನಂತರ, ಪ್ರಪಂಚದಾದ್ಯಂತ ನಿರಂತರವಾಗಿ ಸಂತಾಪ ಸೂಚಿಸಲಾಗುತ್ತಿದೆ. ಜಾಗತಿಕ ನಾಯಕರು ಕೂಡ ನನಗೆ ಕರೆ ಮಾಡಿದ್ದಾರೆ, ಪತ್ರ ಬರೆದಿದ್ದಾರೆ. ಈ ಘೋರ ಭಯೋತ್ಪಾದಕ ದಾಳಿಯನ್ನು ಎಲ್ಲರೂ ಬಲವಾಗಿ ಖಂಡಿಸಿದ್ದಾರೆ. ಸಂತ್ರಸ್ತ ಕುಟುಂಬಗಳಿಗೆ ಖಂಡಿತವಾಗಿಯೂ ನ್ಯಾಯ ಸಿಗುತ್ತದೆ ಎಂದು ನಾನು ಮತ್ತೊಮ್ಮೆ ಭರವಸೆ ನೀಡುತ್ತೇನೆ. ಹಾಗೆಯೇ ಈ ದಾಳಿಯ ಅಪರಾಧಿಗಳು ಮತ್ತು ಸಂಚು–ಕೋರರಿಗೆ ಕಠಿಣ ಶಿಕ್ಷೆ ವಿಧಿಸಲಾಗುವುದು ಎಂದು ತಿಳಿಸಿದರು.

ಇದೇ ವೇಳೆ, ಮ್ಯಾನ್ಮಾರ್‌ನಲ್ಲಿ ಸಂಭವಿಸಿದ ಭೂಕಂಪದ ವಿಚಾರವನ್ನು ಪ್ರಸ್ತಾಪಿಸಿದ ಅವರು, ಈ ಭೂಕಂಪದ ಭಯಾನಕ ಚಿತ್ರಗಳನ್ನು ನೀವು ನೋಡಿರಬೇಕು. ಭೂಕಂಪವು ಅಲ್ಲಿ ಭಾರಿ ವಿನಾಶವನ್ನುಂಟುಮಾಡಿತು, ಅವಶೇಷಗಳಲ್ಲಿ ಸಿಲುಕಿದ್ದ ಜನರಿಗೆ ಪ್ರತಿ ಉಸಿರು, ಪ್ರತಿ ಕ್ಷಣವೂ ಅಮೂಲ್ಯವಾಗಿತ್ತು, ಆದ್ದರಿಂದ ಭಾರತವು ಮ್ಯಾನ್ಮಾರ್‌ನಲ್ಲಿರುವ ನಮ್ಮ ಸಹೋದರ ಸಹೋದರಿಯರಿಗಾಗಿ ಆಪರೇಷನ್ ಬ್ರಹ್ಮವನ್ನು ತಕ್ಷಣವೇ ಪ್ರಾರಂಭಿಸಿತು. ವಾಯುಪಡೆಯ ವಿಮಾನಗಳಿಂದ ಹಿಡಿದು ನೌಕಾಪಡೆಯ ಹಡಗುಗಳವರೆಗೆ ಎಲ್ಲವನ್ನೂ ಮ್ಯಾನ್ಮಾರ್‌ಗೆ ಸಹಾಯ ಮಾಡಲು ಕಳುಹಿಸಲಾಗಿದೆ. ಭಾರತೀಯ ತಂಡವು ಅಲ್ಲಿ ಒಂದು ಕ್ಷೇತ್ರ ಆಸ್ಪತ್ರೆಯನ್ನು ಸಿದ್ಧಪಡಿಸಿತು ಎಂದು ಹೇಳಿದರು.

ಯಾವುದೇ ನೈಸರ್ಗಿಕ ವಿಕೋಪವನ್ನು ಎದುರಿಸುವಾಗ ನಿಮ್ಮ ಜಾಗರೂಕತೆ ಮತ್ತು ಜಾಗರೂಕತೆ ಬಹಳ ಮುಖ್ಯ. ಈಗ ನೀವು ನಿಮ್ಮ ಮೊಬೈಲ್‌ನಲ್ಲಿರುವ ವಿಶೇಷ ಅಪ್ಲಿಕೇಶನ್‌ನಿಂದ ಈ ಜಾಗರೂಕತೆಯಲ್ಲಿ ಸಹಾಯ ಪಡೆಯಬಹುದು. ಈ ಅಪ್ಲಿಕೇಶನ್‌ಗಳು ಯಾವುದೇ ನೈಸರ್ಗಿಕ ವಿಕೋಪದಲ್ಲಿ ಸಿಲುಕಿಕೊಳ್ಳದಂತೆ ನಿಮ್ಮನ್ನು ರಕ್ಷಿಸಬಹುದು. ಇದರ ಹೆಸರೂ 'ಸಾಚೆತ್'. 'ಸಚೇತ್ ಅಪ್ಲಿಕೇಶನ್' ಅನ್ನು ಭಾರತದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರವು ಸಿದ್ಧಪಡಿಸಿದೆ ಎಂದು ಹೇಳಿದರು.

## ಇಂದು ದವನ ನೂತನ ಕಾಲೇಜಿಂದ ಬೃಹತ್ ಆಹಾರ ಮೇಳ

**ದಾವಣಗೆರೆ:** ದವನ್ ಇನ್ಸ್‌ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಮ್ಯಾನೇಜ್ಮೆಂಟ್ ಸ್ಟಡೀಸ್ ನ್ ದವನ್ ಮತ್ತು ನೂತನ ಪದವಿ ಕಾಲೇಜುಗಳಿಂದ ಪದವಿ ವಿದ್ಯಾರ್ಥಿಗಳಿಗೆ ದವನ್ ಕಾರ್ನಿವಲ್–2025 ಬೃಹತ್ ಆಹಾರಮೇಳ ಏ.28ರಂದು ಬೆಳಿಗ್ಗೆ 11–30 ಕ್ಕೆ ಇಲ್ಲಿನ ಬಾಪೂಜಿ ಬ್ಯಾಂಕ್ ಸಮುದಾಯ ಭವನದ ಆವರಣದಲ್ಲಿ ನಡೆಯಲಿದೆ.

ಆಹಾರ ಮೇಳದಲ್ಲಿ ದವನ್ ಪದವಿ ಕಾಲೇಜಿನ ಕಾರ್ಯದರ್ಶಿ ವೀರೇಶ್ ಪಟೇಲ್, ಜಂಟಿ ಕಾರ್ಯದರ್ಶಿ ಹಾಗೂ ಪ್ರಾಚಾರ್ಯರಾದ ಡಾ ಅಂಜು ಜಿ. ಎಸ್., ನೂತನ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಎನ್. ಪರುಶುರಾಮನಗೌಡ, ನಿರ್ದೇಶಕರಾದ ಹರ್ಷರಾಜ್ ಎ. ಗುಜ್ಜರ್ ಉಪ–ಪ್ರಾಚಾರ್ಯರಾದ ಪ್ರೊ ಅನಿತಾ ಎನ್., ಸ್ಪರ್ಧೆಯ ಸಂಯೋಜಕರಾದ ಪ್ರೊ. ಶಂಕರ್ ಬಿ. ಸಿ., ಪಾಲ್ಗೊಳ್ಳಲಿದ್ದಾರೆ.

ಸಂಜೆ 5 ರವರೆಗೆ ನಡೆಯುವ ಸ್ಪರ್ಧೆಯಲ್ಲಿ ಹದಿನಾಲ್ಕು ಆಹಾರ ಮಳಿಗೆಗಳು 14 ಗೇಮ್ ಸ್ಟಾಲ್ ಗಳಿಂದ ಕೂಡಿರುವ ಆಹಾರ ಮೇಳದಲ್ಲಿ ದವನ್ ನೂತನ ಪದವಿ ಕಾಲೇಜಿನ ವಿದ್ಯಾರ್ಥಿಗಳು ಉತ್ತರ ಭಾರತ, ದಕ್ಷಿಣ ಭಾರತ, ವಿವಿಧ ಪ್ರಾದೇಶಿಕ ಪ್ರಮುಖ ಆಹಾರಗಳ, ಪ್ರದರ್ಶನ ಮತ್ತು ಮಾರಾಟ ವ್ಯವಸ್ಥೆ ಮಾಡಲಾಗಿದೆ. ಸುಮಾರು ನಾಲ್ಕು ಸಾವಿರ ಜನರು ಪಾಲ್ಗೊಳ್ಳಲಿರುವ ಬೃಹತ್ ಆಹಾರಮೇಳ ಇದಾಗಿದ್ದು ಆಹಾರಮೇಳದಲ್ಲಿ ಆಹಾರ ಸವಿಯುವುದರ ಜೊತೆಗೆ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಸ್ಪರ್ಧೆಗಳು ನಡೆಯಲಿವೆ ಎಂದು ನಿರ್ದೇಶಕ ಹರ್ಷ ರಾಜ್ ವಿ ಗುಜ್ಜರ್ ತಿಳಿಸಿದ್ದಾರೆ.

## ನಾಳೆ ನಿವೃತ್ತಿ ಸಮಾರಂಭ

**ದಾವಣಗೆರೆ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಪ್ರೊ. ಎಸ್. ಆರ್. ಅಂಜನಪ್ಪ ಅವರ ನಿವೃತ್ತಿ ಸಮಾರಂಭವನ್ನು ಏ.29 ರಂದು ಬೆಳಿಗ್ಗೆ 10–30 ಕ್ಕೆ ಕಾಲೇಕಿನ ಕಾಮರ್ಸ್ ವಿಭಾಗದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

## ಮತ್ತೆ ಅರಳಿದವು ಬಿತ್ತಿ ಪತ್ರಗಳ ಪ್ರದರ್ಶನ ಇಂದು

**ದಾವಣಗೆರೆ:** ನಗರದ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ಏ.28ರಂದು ಬೆಳಗ್ಗೆ 11 ಗಂಟೆಗೆ ಮತ್ತೆ ಅರಳಿದವು ಬಿತ್ತಿ ಪತ್ರಗಳ ಪ್ರದರ್ಶನ ಕಾರ್ಯಕ್ರಮವು ಆಯೋಜಿಸಲಾಗಿದೆ.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜೈರಾಜ್ ಎಂ. ಚಿಕ್ಕಪಾಟೀಲ್ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮವನ್ನು ದೃಶ್ಯಕಲಾ ಮಹಾವಿದ್ಯಾಲಯದ ನಿವೃತ್ತ ಸಂಯೋಜನಾಧಿಕಾರಿ ಎಲ್ ಕೆ ಹನುಮಂತಚಾರಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಮಂಜುನಾಥ್ ಕಾಯಕದ ಪಾಲ್ಗೊಳ್ಳಲಿದ್ದು, ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಸತೀಶ್ ಪಿ. ವಲ್ಲೇಪುರಿ ಉಪಸ್ಥಿತರಿರುವರು. ಬೋಧನಾ ಸಹಾಯಕ ಎಸ್. ಹೆಚ್ ಹರೀಶ್ ಪ್ರಸ್ತಾವಿಕ ನುಡಿಯಲಿದ್ದಾರೆ.

## ಜಿಎಫ್‌ಜಿಸಿ ಕಾಲೇಜಿನ ವಿಶೇಷ ವಾರ್ಷಿಕ ಶಿಬಿರ

**ದಾವಣಗೆರೆ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಬೇತೂರು ಗ್ರಾಮ ಪಂಚಾಯಿತಿ ಹಾಗೂ ಬೇತೂರು ಗ್ರಾಮಸ್ಥರ ಸಂಯುಕ್ತಾಶ್ರಯದಲ್ಲಿ 2024–25 ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ವಾರ್ಷಿಕ ಶಿಬಿರ ಸಾಮಾಜಿಕ ಸಾಮರಸ್ಯದೆಡೆಗೆ ಯುವಜನತೆ ಕಾರ್ಯಕ್ರಮವು ಏಪ್ರಿಲ್ 28 ರಿಂದ ಮೇ 4ರ ವರೆಗೆ ದಾವಣಗೆರೆ ತಾಲೂಕಿನ ಬೇತೂರು ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆ, ಶ್ರೀ ತರಳಬಾಳು ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಏಪ್ರಿಲ್ 28ರಂದು ಬೆಳಗ್ಗೆ 11 ಗಂಟೆಗೆ ಸ್ವಯಂಸೇವಕರ ನೋಂದಣಿ ಮತ್ತು ಗ್ರಾಮದಲ್ಲಿ ಪಥಸಂಚಲ ನಡೆಯಲಿದೆ. ಸಂಜೆ 6 ಗಂಟೆಗೆ ನಡೆಯುವ ಉದ್ಘಾಟನಾ ಸಮಾರಂಭವನ್ನು ಸಚಿವ ಎಸ್. ಎಸ್ ಮಲ್ಲಿಕಾರ್ಜುನ್ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಪ್ರೊ.ಸಿ ಬಸವರಾಜ್ ತಹಸಿಲ್ದಾರ್ ವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಸಂಯೋಜನಾಧಿಕಾರಿ ಡಾ. ಅಶೋಕ್ ಕುಮಾರ್ ವಿ. ಪಾಳೇದ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.

ನಂತರ ಪ್ರತಿದಿನವೂ ಸಂಜೆ 6:30ಕ್ಕೆ ವೇದಿಕೆ ಕಾರ್ಯಕ್ರಮಗಳು ಜರಗಲಿದ್ದು, ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಮೇ 4ರಂದು ನಡೆಯುವ ಸಮಾರೋಪ ಸಮಾರಂಭವು ಬೆಳಗ್ಗೆ 10.30 ಕ್ಕೆ ಕಾಲೇಜಿನ ಪ್ರಾಂಶುಪಾಲರಾದ ಬಸವರಾಜ್ ಸಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಜರಗಲಿದ್ದು ಐಕ್ಯೂಎಸಿ ಸಂಚಾಲಕ ಡಾ.ಜೆ ಪಿ ಗುರುರಾಜ್ ಉಪಸ್ಥಿತರಿರುವರು. ವಿಶೇಷ ಆಹ್ವಾನಿತರಾಗಿ ಸಂಯೋಜನಾಧಿಕಾರಿ ಡಾ. ಅಶೋಕ್ ಕುಮಾರ್ ವಿ ಪಾಳ್ಯದ ಪಾಲ್ಗೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಗ್ರಾಮ ಪಂಚಾಯತ್ ಅಧ್ಯಕ್ಷ ಕೆ ಎಂ. ರೇವಣಸಿದ್ದಪ್ಪ ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ.

## ಇಂದು ಹೆಚ್‌ಪಿವಿ ಲಸಿಕ ಅಭಿಯಾನ

**ದಾವಣಗೆರೆ:** ಸುಕ್ಷೇಮ ಆಸ್ಪತ್ರೆ, ರೋಟರಿ ದಾವಣಗೆರೆ, ಕರ್ನಾಟಕ ಹಿಮೋಫಿಲಿಯಾ ಸೊಸೈಟಿ ಮತ್ತು ಪರಿವರ್ತನಾ ವೇದಿಕೆ ಇವರ ಸಹಯೋಗದಲ್ಲಿ ಏ. 28ರಂದು ಹಿಮೋಫಿಲಿಯಾ ದಿನಾಚರಣೆ ಪ್ರಯುಕ್ತ ಬೆಳಗ್ಗೆ 11 ರಿಂದ 6 ಗಂಟೆವರೆಗೆ ನಗರದ ಸುಕ್ಷೇಮ ಆಸ್ಪತ್ರೆಯಲ್ಲಿ ಹೆಚ್‌ಪಿವಿ ಲಸಿಕ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಭವಿಷ್ಯದಲ್ಲಿ ಬರಬಹುದಾದ ಕ್ಯಾನ್ಸರ್‌ನ್ನು ತಡೆಗಟ್ಟುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಲಾಗಿದೆ.

## ಬಸವಣ್ಣನವರ ವಚನಗಳಿಂದ ನಮ್ಮೆಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ : ಮಾಜಿ ಮೇಯರ್ ಎಸ್.ಟಿ.ವೀರೇಶ್



**ದಾವಣಗೆರೆ :** ಪ್ರಸ್ತುತ ಸಮಾಜದಲ್ಲಿ ಸಾಕಷ್ಟು ಸಮಸ್ಯೆಗಳಿವೆ, ಆ ಎಲ್ಲಾ ಸಮಸ್ಯೆಗಳಿಗೆ ಬಸವಣ್ಣನವರು ನೂರಾರು ವರ್ಷಗಳ ಹಿಂದೆಯೇ ಪರಿಹಾರವನ್ನು ಕೊಟ್ಟಿದ್ದಾರೆ. ಸಾಮಾಜಿಕ, ರಾಜಕೀಯ, ಪರಿಸರ ಸೇರಿದಂತೆ ಹಲವಾರು ರೀತಿಯ ಸಮಸ್ಯೆಗಳನ್ನು ನೋಡುತ್ತಿದ್ದೇವೆ. ಸಮಾಜದಲ್ಲಿ ಅಶಾಂತಿಗೆ ಕಾರಣವಾಗುವಂತಹ ವಿಚಿತ್ರ ಶಕ್ತಿಗಳು ದುಷ್ಕೃತ್ಯಗಳಿಂದ ಸಾಕಷ್ಟು ನೋವನ್ನು ನಾವು ಅನುಭವಿಸುತ್ತಿದ್ದೇವೆ. ಈ ಎಲ್ಲಾ ಸಮಸ್ಯೆಗಳಿಗೆ ಬಸವಣ್ಣನವರು ತಮ್ಮ ಅನುಭವ ಮಂಟಪದಲ್ಲಿ 12ನೇ ಶತಮಾನದಲ್ಲಿ ವಚನಗಳ ಮೂಲಕ ನಮಗೆ ದಾರಿದೀಪವನ್ನು ತೋರಿಸಿದ್ದಾರೆ. ನಮ್ಮೆಲ್ಲ ಸಮಸ್ಯೆಗಳಿಗೆ ಬಸವಣ್ಣನವರ ವಚನಗಳಿಂದ ಪರಿಹಾರ ಸಿಗುತ್ತದೆ ಎಂದು ಮಾಜಿ ಮೇಯರ್ ಎಸ್.ಟಿ.ವೀರೇಶ ಹೇಳಿದರು.

ನಗರದ 25ನೇ ವಾರ್ಡಿನ ಗಣೇಶ್ ಬಡಾವಣೆ, ಮನೋಮಿ ಲೇಔಟ್‌ನಲ್ಲಿ ಭಾನುವಾರ ಬೆಳಿಗ್ಗೆ ಬಸವ ಕೇಂದ್ರ ವಿರಕ್ತಮಠ, ಲಿಂಗಾಯತ(ವೀರಶೈವ) ತರುಣ ಸಂಘದ ಸಹಯೋಗದಲ್ಲಿ ಬಸವ ಜಯಂತಿ ಅಂಗವಾಗಿ ನಡೆದ ಬಸವ ಪ್ರಭಾತ್ ಪೇರಿ ಜನಜಾಗೃತಿ ಪಾದಯಾತ್ರೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಇಡೀ ವಿಶ್ವದಲ್ಲಿಯೇ ಪ್ರಪ್ರಥಮ ಬಾರಿಗೆ ಬಸವ ಜಯಂತಿ ಆಚರಣೆ ಮಾಡಿದ ಹೆಗ್ಗಳಿಗೆ ನಮ್ಮ ದಾವಣಗೆರೆಯ ವಿರಕ್ತಮಠಕ್ಕೆ ಇದೆ. ನಾವು ವೀರಶೈವರು, ಲಿಂಗಾಯತರು ಎಂದು ಹೇಳುತ್ತೇವೆ. ಆದರೆ ಅವುಗಳ ತತ್ವಾದರ್ಶಗಳನ್ನು ಪಾಲನೆ ಮಾಡುವುದರಲ್ಲಿ ನಾವು ಹಿಂದೆ ಉಳಿದಿದ್ದೇವೆ. ಬಸವಣ್ಣನವರ ಆದರ್ಶ, ಆಚಾರ–ವಿಚಾರಗಳ ಬಗ್ಗೆ ಪ್ರಚಾರ ಮಾಡುವ ನಿಟ್ಟಿನಲ್ಲಿ ವಿರಕ್ತಮಠ ಸಾಕಷ್ಟು ದಿಟ್ಟಹೆಜ್ಜೆಯನ್ನಿಟ್ಟು ಕೆಲಸ ಮಾಡುತ್ತಿದೆ. ಇಂತಹ ಕಾರ್ಯಗಳಲ್ಲಿ ನಾವು ನೀವು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳೋಣ ಎಂದರು.

ಕಾರ್ಯಕ್ರಮದ ಸಾನಿಧ್ಯವಹಿಸಿದ್ದ ಡಾ.ಬಸವಪ್ರಭು ಸ್ವಾಮೀಜಿ ಮಾತನಾಡಿ, ಬಸವಣ್ಣನವರ ತತ್ವಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಬಸವಣ್ಣನವರು ಸ್ವರ್ಗ ನರಕ ಕುರಿತು ತಮ್ಮ ವಚನಗಳಲ್ಲಿ ಹೇಳಿದ್ದಾರೆ. ಎಲ್ಲರೂ ಹೇಳುವಂತೆ ಸ್ವರ್ಗ ಮೇಲೆ, ನರಕ ಪಾತಾಳದಲ್ಲಿದೆ ಎಂದು ತಿಳಿದುಕೊಂಡಿದ್ದೇವೆ. ಸತ್ತ ಮೇಲೆ ಎಲ್ಲರೂ ಸ್ವರ್ಗಕ್ಕೆ ಹೋಗಬೇಕು, ಕೈಲಾಸಕ್ಕೆ ಹೋಗಬೇಕು ಎಂದು ಬಹಳ ಜನ ಆಸೆ ಪಡುತ್ತಾರೆ. ಸ್ವರ್ಗ ನರಕ ಮೇಲೆಯೂ ಇಲ್ಲ, ಕೆಳಗೂ ಇಲ್ಲ. ಎರಡೂ ನಮ್ಮ ನಾಲಗೆ ಮೇಲಿವೆ ಎಂದು ಬಸವಣ್ಣನವರು ಹೇಳಿದ್ದಾರೆ. ನಾವು ಎಲ್ಲರೊಂದಿಗೆ ಪ್ರೀತಿಯಿಂದ ಮಾತನಾಡಿದಾಗ, ಮಾತನಾಡಿಸಿದಾಗ ಅಲ್ಲಿಯೇ ಸ್ವರ್ಗ ನಿರ್ಮಾಣವಾಗುವುದು. ನಾವು ಕೆಟ್ಟಪದಗಳನ್ನು ಮಾತನಾಡಿದರೆ ಅಲ್ಲೇ ನರಕ ನಿರ್ಮಾಣವಾಗುವುದು. ಹೊರಗೆ ಒಳಗೆ ಒಳ್ಳೆಯ ಮಾತುಗಳನ್ನಾಡಿದಾಗ ಮನೆಯೂ ಸ್ವರ್ಗವಾಗುತ್ತದೆ. ಜಗಳ ಮಾಡಿಕೊಳ್ಳುತ್ತಾ ಕುಳಿತರೆ ನರಕವಾಗುತ್ತದೆ. (3ನೇ ಪುಟ–

## 'ಮರಳಿ ಮನಸಾಗಿದೆ' ಚಿತ್ರ ಜುಲೈನಲ್ಲಿ ತೆರೆಗೆ: ಭರ್ಜರಿ ಪ್ರಚಾರದಲ್ಲಿ ಚಿತ್ರತಂಡ




**ದಾವಣಗೆರೆ:** ಥಿಯೇಟರ್ ಒಳಗೆ ಬಂದ ಪ್ರೇಕ್ಷಕರಿಗೆ ಉತ್ತಮ ಪ್ರೇಮಕಥೆಯ ಜೊತೆಗೆ ಹೊರಗೆ ಹೋಗುವಾಗ ಒಂದೊಳ್ಳೆ ಸಂದೇಶವನ್ನು 'ಮರಳಿ ಮನಸಾಗಿದೆ' ಸಿನಿಮಾ ನೀಡಲಿದೆ ಎಂದು ಕಥೆ, ಚಿತ್ರಕಥೆ, ಸಂಭಾಷಣೆ ಹಾಗೂ ನಿರ್ದೇಶನದ ಹೊಣೆ ಹೊತ್ತಿರುವ ನಾಗರಾಜ್ ಶಂಕರ್ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆನಕ ಟಾಕೀಸ್ ಅಡಿ ನಿರ್ಮಾಣವಾಗಿರುವ ಚಿತ್ರವು ಪೋಸ್ಟ್ ಪ್ರೊಡಕ್ಷನ್ ಹಂತದಲ್ಲಿದ್ದು, ಸಿನಿಮಾದಲ್ಲಿ 6 ಹಾಡುಗಳು, ಮೂರು ಬೀಟ್ ಇದೆ. ಮಂಗಳೂರು, ಬೆಂಗಳೂರು, ಕರಾವಳಿ, ಕಳಸ, ದಾವಣಗೆರೆ ಸೇರಿದಂತೆ ರಾಜ್ಯಾದ್ಯಂತ ಚಿತ್ರೀಕರಣವಾಗಿರುವ ಚಿತ್ರವು ಇದೇ ಜುಲೈ ಮೊದಲ ಅಥವಾ ಎರಡನೇ ವಾರದಲ್ಲಿ ತೆರೆಗೆ ಬರಲಿದೆ ಎಂದರು.

ತಾರಾಗಣದಲ್ಲಿ ನಾಯಕ ನಟನಾಗಿ ಅರ್ಜುನ್ ವೇದಾಂತ, ನಾಯಕಿಯರಾಗಿ ನಿರೀಕ್ಷ ಶೆಟ್ಟಿ ಹಾಗೂ ಸ್ಮೃತಿ, ಪ್ರಮುಖ ಪಾತ್ರದಲ್ಲಿ ನಟ, ನಿರ್ದೇಶಕ ಟಿ.ಎಸ್. ನಾಗಾಭರಣ, ಮಾನಸಿ, ಸುಧೀರ್ ಇನ್ನಿತರರಿದ್ದಾರೆ. ವಿನು ಮನಸು ಸಂಗೀತ ನೀಡಿದ್ದು, ಎಸ್.ಹಾಲೇಶ್ ಅವರ ಛಾಯಾಗ್ರಹಣ, ಅಲ್ಟಿಮೇಟ್ ಶಿವು ಅವರ ಸಾಹಸವಿದೆ ಎಂದು ಮಾಹಿತಿ ನೀಡಿದರು.

ದಾವಣಗೆರೆಯವರೇ ಆದ ನಿರ್ಮಾಪಕ ಮುದೇಗೌಡ್ರ ನವೀನ್ ಕುಮಾರ್ ಮಾತನಾಡಿ, 'ಮರಳಿ ಮನಸಾಗಿದೆ' ಚಿತ್ರ ಉತ್ತಮವಾಗಿ ಮೂಡಿಬಂದಿದ್ದು, ಮಾರ್ಚ್ 8 ರಂದು ಬೆಂಗಳೂರಿನ ಜಿಟಿ ಮಾಲ್ ನಲ್ಲಿ ಚಿತ್ರದ 'ಎದುರಿಗೆ ಬಂದರೆ ಹೃದಯಕೆ ತೊಂದರೆ' ಹಾಡು ಬಿಡುಗಡೆಯಾಗಿದ್ದು, ಎರಡನೇ ಹಾಡನ್ನು ಗುಲ್ಬರ್ಗದಲ್ಲಿ ರಿಲೀಸ್ ಮಾಡಲಾಗಿದೆ. (3ನೇ ಪುಟಕ್ಕೆ)

## ಸಿದ್ದು ಹೇಳಿಕೆ ಮತಬ್ಯಾಂಕ್ ರಾಜಕಾರಣಕ್ಕೆ ತಾಜಾ ನಿದರ್ಶನ: ರೇಣುಕಾಚಾರ್ಯ ವಾಗ್ದಾಳಿ

**ದಾವಣಗೆರೆ:** ಪಾಕಿಸ್ತಾನದ ಮೇಲೆ ಯುದ್ಧ ಮಾಡುವ ಅನಿವಾರ್ಯತೆ ಇಲ್ಲ ಎಂಬ ಸಿದ್ದು ಹೇಳಿಕೆ ಸರಿಯಲ್ಲ. ಅವರ ಈ ಹೇಳಿಕೆ ಕಾಂಗ್ರೆಸ್ ಹಾಗೂ ಸಿದ್ದರಾಮಯ್ಯ ಅವರ ಮತಬ್ಯಾಂಕ್ ರಾಜಕಾರಣಕ್ಕೆ ಇದೊಂದು ತಾಜಾ ನಿದರ್ಶನವಾಗಿದೆ ಎಂದು ಮಾಜಿ ಸಚಿವ ರೇಣುಕಾಚಾರ್ಯ ತೀವ್ರ ವಾಗ್ದಾಳಿ ನಡೆಸಿದರು.

ಭಾನುವಾರ ಪ್ರವಾಸಿ ಮಂದಿರದಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆ ವಿರುದ್ಧ ಎಂಪಿಆರ್ ಕಿಡಿಕಾರಿದರು.

ಪಾಕಿಸ್ತಾನದ ಮಾಧ್ಯಮ ಕೂಡ ಸಿದ್ದರಾಮಯ್ಯ ಹೇಳಿಕೆಯನ್ನು ಕೊಂಡಾಡುತ್ತಿದೆ. ಜನರ ರಕ್ಷಣೆಗಿಂತ ಮತ ಬ್ಯಾಂಕ್ ರಾಜಕಾರಣವೇ ಸಿದ್ದರಾಮಯ್ಯ ಅವರಿಗೆ ಮುಖ್ಯವಾಗಿದೆ. ಭಾರತದ ವಿರುದ್ಧ ಹೇಳಿಕೆ ನೀಡಿದ ವಾದ್ರಾ ಸೇರಿ ಹಲವರಿಗೆ ಗುಂಡಿಟ್ಟು ಹೊಡೆದರೆ ದೇಶ ಸರಿಯಾಗಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರಲ್ಲದೆ,

ಕಾಂಗ್ರೆಸ್ ಭಾರತದ ಪರವೋ, ಪಾಕಿಸ್ತಾನದ ಪರವೋ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಪಟ್ಟು ಹಿಡಿದರು. ಯುದ್ಧ ಅನಿವಾರ್ಯವಿದೆ. ಧರ್ಮದ ಆಧಾರದ ಮೇಲೆ ಹತ್ಯೆ ಮಾಡುವುದನ್ನು ಸಹಿಸಲು ಸಾಧ್ಯವೇ ಇಲ್ಲ. ಸಿದ್ದರಾಮಯ್ಯ ನಾಲಿಗೆಯಿಂದ ಹರಿಬಿಟ್ಟ ಹೇಳಿಕೆಯನ್ನು ಹಿಂಪಡೆಯಬೇಕು. ಕಾಶ್ಮೀರದ ಪೆಹಲ್ಗಾಮ್ ಹತ್ಯೆ ಖಂಡನೀಯ.

ಘಟನೆಯನ್ನು ಎಲ್ಲರೂ ಪಕ್ಷಾತೀತವಾಗಿ ಖಂಡಿಸಬೇಕು. ಸಿದ್ದರಾಮಯ್ಯ ಅವರ



ಹೇಳಿಕೆ ಖಂಡನೀಯವಾದದ್ದು. ಕೇಂದ್ರ ಸರ್ಕಾರದ ತೀರ್ಮಾನಕ್ಕೆ ನೀವು ಬದ್ಧರಾಗಿರಬೇಕು ಅಲ್ಲವೇ ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ನದ್ದು ದ್ವಿಮುಖ ನೀತಿ ಆಗಿದೆ. ಮಲ್ಲಿಕಾರ್ಜುನ್ ಖರ್ಗೆ ಹಾಗೂ ರಾಹುಲ್ ಗಾಂಧಿ ಮತ್ತು ಸಿದ್ದರಾಮಯ್ಯ ಹೇಳಿಕೆ ನಡುವೆ ಸಾಕಷ್ಟು ವ್ಯತ್ಯಾಸವಿದೆ.

ಪಾಕಿಸ್ತಾನದ ನಿವಾಸಿಗಳು ಅಕ್ರಮವಾಗಿ ಕರ್ನಾಟಕದಲ್ಲಿ ನೆಲೆಸಿದ್ದಾರೆ. ಇವರನ್ನು ಒದ್ದು ಹೊರಗೆ ಹಾಕಬೇಕು. ದೇಶದ ಯೋಧರು ತಮ್ಮ ಜೀವದ ಹಂಗು ತೊರೆದು ಹೋರಾಟ ಮಾಡುತ್ತಿದ್ದಾರೆ ಅವರ ಆತ್ಮಸ್ಥೈರ್ಯ ಹೆಚ್ಚು ಮಾಡಬೇಕೆ ಹೊರತು, ಭದ್ರತಾ ವೈಫಲ್ಯದ ಕುರಿತು ಟೀಕೆ ಮಾಡುವುದು ಬೇಡ ಎಂದರು.

'ಸಿಂಧೂ ನದಿ ನೀರು ಸ್ಥಗಿತ ಮಾಡಿದರೆ ರಕ್ತ ಹರಿಯುತ್ತದೆ' ಎಂದಿದ್ದಾನೆ ಭುಟೆ–ಪ್ಪೋ ಭುಟ್ಟೊ ಹೇಳಿಕೆ ಅಯೋಗ್ಯತನದಿಂದ ಕೂಡಿದೆ. ಈತನನ್ನು ಗುಂಡಿಟ್ಟು ಕೊಲ್ಲಬೇಕು. ಸಿದ್ದರಾಮಯ್ಯ ಅವರ ನಡವಳಿಕೆಯಿಂದ ರಾಜ್ಯದಲ್ಲಿ ಭಯೋತ್ಪಾದನೆ ಹೆಚ್ಚಾಗುತ್ತಿದೆ. ಅವರು ರಾಜ್ಯದಲ್ಲಿ ಹಿಂದೂ ವಿರೋಧಿ ಆಡಳಿತ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ನಮ್ಮ ನೆಚ್ಚಿನ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಭಯೋತ್ಪಾದನಾ ನಿರ್ಮೂಲನೆ ಮಾಡುವ ಬದ್ಧತೆ, ಇಚ್ಛಾಶಕ್ತಿ ಇದೆ. ಉಗ್ರರನ್ನು ಹುಡುಕಿ ಹೊಡೆಯುವುದು ನಿಶ್ಚಿತ. 24 ಗಂಟೆಯಲ್ಲಿ ಪಾಕಿಸ್ತಾನ ಇರದಂತೆ ಹೊಡೆದು ಹಾಕುವ ಶಕ್ತಿ ಭಾರತೀಯ ಸೇನೆಗೆ ಇದೆ. ಪಾಕಿಸ್ತಾನವನ್ನು ವಿಶ್ವದ ಭೂಪಟದಿಂದ ನಿರ್ಮೂಲನೆ ಆಗಬೇಕು. ಹಾಗೂ ಪೆಹಲ್ಗಾಮ್ ಘಟನೆ ಕಾಶ್ಮೀರ ಸರ್ಕಾರದ ವೈಫಲ್ಯವಾಗಿದ್ದು, ಅಲ್ಲಿನ ಸರ್ಕಾರವನ್ನು ಕೂಡ ವಜಾ ಮಾಡಬೇಕು ಎಂದು ಆಗ್ರಹಿಸಿದರು.

## ಸಾಧನೆಗೆ ಶ್ರಮ ತಾಳ್ಮೆ ಶಕ್ತಿ ಬೇಕು: ಡಾ. ನಾಗರಾಜ ಬೈರಿ




**ದಾವಣಗೆರೆ:** ಸಾಧನೆ ಮಾಡುವುದು ಅಷ್ಟು ಸುಲಭದ ಕೆಲಸವಲ್ಲ. ಸಾಧನೆ ಮಾಡಲು ಬಹಳಷ್ಟು ಶ್ರಮ, ತಾಳ್ಮೆ, ಶಕ್ತಿ ಬೇಕು. ಅಷ್ಟು ಸುಲಭವಾಗಿ ಗುರುತಿಸಿಕೊಳ್ಳುವುದು ಸಾಧ್ಯವಿಲ್ಲ ಎಂದು ಮೈಸೂರು ಜಿಲ್ಲೆ ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ಡಾ. ನಾಗರಾಜ ಬೈರಿ ಆಶಿಸಿದರು.

ನಗರದ ಗಡಿಯಾರ ಕಂಬದ ಬಳಿ ಇರುವ ಚನ್ನಗಿರಿ ವಿರೂಪಾಕ್ಷಪ್ಪ ಕಲ್ಯಾಣ ಮಂಟಪದಲ್ಲಿ ಭಾನುವಾರ ಬೆಂಗಳೂರಿನ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಸಹಯೋಗದಲ್ಲಿ 70ನೇ ವರ್ಷದ ಕನ್ನಡ ನಿತ್ಯೋತ್ಸವ ಪ್ರಯುಕ್ತ ನಡೆದ ಸರಸ್ವತಿ ಸಾಧಕ ಸಿರಿ ರಾಷ್ಟ್ರಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ನಮ್ಮ ಜನಸಂಖ್ಯೆ ಕಡಿಮೆ ಇದ್ದಾಗ ಸಾಧನೆ ನಮ್ಮ ಮುಂದೆ ಬರುತ್ತಿತ್ತು. ಈಗ ಬರುವುದು ಕಷ್ಟ. ಅಂತಹದರಲ್ಲಿ ನಿಮ್ಮ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವುದು ಪುಣ್ಯದ ಕೆಲಸವಾಗಿದೆ. ಸರ್ಕಾರದವರು ಅಂತಹ ಸಾಧಕರನ್ನು ಗುರುತಿಸಿ ಮಾಡಬೇಕಾದ ಗೌರವವನ್ನು ಸಂಘ ಸಂಸ್ಥೆಗಳು ಮಾಡುತ್ತಿದ್ದು, ನಿಮ್ಮಗಳ ಸಾಧನೆ ಇನ್ನೊಬ್ಬರಿಗೆ ಸ್ಫೂರ್ತಿ ಆಗಬೇಕು. ನಿಮ್ಮ ಕೆಲಸಕ್ಕೆ ಮತ್ತಷ್ಟು ಜವಾಬ್ದಾರಿಗಳನ್ನು ತರಲಿ ಎಂದು ಹಾರೈಸಿದರು.

ಸಾಮಾನ್ಯವಾಗಿ ನಾವು ಸರ್ಕಾರಿ ಶಾಲೆಯಲ್ಲಿ ನೋಂದಣಿ ನೋಡಿದಾಗ ನೂರು ಮಕ್ಕಳು ದಾಖಲಾಗುವುದು ಹೆಚ್ಚು, ನಮ್ಮ ಮೈಸೂರು ಕಡೆಗೆ ಇದನ್ನು ನಾವು ನೋಡುತ್ತಿದ್ದೇವೆ. ಆದ–ರೆ ಡಾ.ನಾಗೇಶ ಸಂಜೀವ ಕಿಣಿಯವರ ಸರ್ಕಾರಿ ಶಾಲೆಯಲ್ಲಿ ಒಂದು ಸಾವಿರಕ್ಕೂ ಹೆಚ್ಚು ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಇದು ನಿಜಕ್ಕೂ ಆಶ್ಚರ್ಯಕರ ಸಂಗತಿ ಎಂದರು. ಅವರ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ನೇತೃತ್ವದಲ್ಲಿ ಈ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ನಡೆಯುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಸಂಘ ಸಂಸ್ಥೆಗಳ ಸೇವಾ ಕಾರ್ಯಗಳನ್ನು ನಾವು ಭೂಕಂಪ, ಚಂಡಮಾರುತ, ಖಾಯಿಲೆಗಳು ಹರಡುವಂತಹ ಪ್ರಾಕೃತಿಕ ವಿಕೋಪ ಸಂದರ್ಭಗಳಲ್ಲಿ ನೋಡಬೇಕು. ಸಂಸಾರ, ಆಸ್ತಿಪಾಸ್ತಿಗಳು ಹಾಳಾಗುತ್ತವೆ. ಅಂತಹ ಸಂದರ್ಭದಲ್ಲಿ ಅವರಿಗೆ ಅವಶ್ಯಕವಾಗಿರುವಂತಹ ವಸ್ತುಗಳನ್ನು ನೀಡಲು ಮುಂದಾಗುತ್ತಾರೆ. ಅವರು ನಮಗೆ ಸಾಕು ಬೇಡ ವಾಪಾಸು ತೆಗೆದುಕೊಂಡು ಹೋಗಲು ಹೇಳುತ್ತಾರೆ. ಅಷ್ಟು ಸಂಘ ಸಂಸ್ಥೆಗಳು ಪರೋಪಕಾರಕ್ಕೆ ಮುಂದಾಗಿರುತ್ತವೆ.

ನಮ್ಮ ಭಾರತ ಎಷ್ಟೇ ಪ್ರಾಕೃತಿಕ ವಿಕೋಪ ಆದರೂ ಕೂಡಾ (3ನೇ ಪುಟಕ್ಕೆ)

## ಜೂನ್‌ನಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿಷತ್‌ನ 4ನೇ ಅಧಿವೇಶನ



**ದಾವಣಗೆರೆ:** ಅಖಿಲ ಭಾರತೀಯ ಸಾಹಿತ್ಯ ಪರಿಷತ್‌ನ ನಾಲ್ಕನೇ ಅಧಿವೇಶನ ಜೂನ್ 7 ಹಾಗೂ 8 ರಂದು ದಾವಣಗೆರೆಯ ಗುಂಡಿ ಮಹದೇವಪ್ಪ ಕಲ್ಯಾಣ ಮಂಟಪದಲ್ಲಿ ನಡೆಯಲಿದೆ ಎಂದು ಪರಿಷದ್ ರಾಜ್ಯ ಪ್ರಧಾನ ಕಾರ್ಯದರ್ಶಿ ರಘುನಂದನ್ ಭಟ್ ತಿಳಿಸಿದರು.

ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿವೇಶನದ ಅಧ್ಯಕ್ಷರಾಗಿ ಬಾಗಲಕೋಟೆಯ ಎಸ್.ಜಿ. ಕೋಟಿ ಆಯ್ಕೆಯಾಗಿದ್ದಾರೆ. ಅವರ ಅಧ್ಯಕ್ಷತೆಯಲ್ಲಿ ಸಾಹಿತ್ಯದಲ್ಲಿ ವಿಷಯದ ಮೇಲೆ ಚರ್ಚೆ, ಸಂವಾದ, ಹರಟೆ, ಕವಿಗೋಷ್ಠಿ ನಡೆಯಲಿವೆ ಎಂದು ತಿಳಿಸಿದರು.

ಜೂ.7 ಬೆಳಗ್ಗೆ 10ಕ್ಕೆ ಸಾಹಿತಿ, ಚಿಂತಕ ಪ್ರೊ. ಪ್ರೇಮಶೇಖರ್ ಅಧಿವೇಶನ ಉದ್ಘಾಟಿಸುವರು. ಅಧಿವೇಶನದ ವಿಷಯದ ಮೇಲೆ ಪ್ರಕಟಗೊಳ್ಳುವ ಪುಸ್ತಕಗಳನ್ನು ಡಾ. ಸಂಗಮೇಶ್ವರ ಸವದತ್ತಿಮಠ ಬಿಡುಗಡೆ ಮಾಡುವರು. ಮೊದಲ ದಿನ ವಿಚಾರಗೋಷ್ಠಿ ಹಾಗೂ ಸಂಜೆ 6 ರಿಂದ ಹರಟೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು. ಜೂ. 8 ಭಾನುವಾರ ಮಧ್ಯಾಹ್ನ 2.30 ಕ್ಕೆ ಸಮಾರೋಪದಲ್ಲಿ ಪರಿಷತ್ತಿನ ರಾಷ್ಟ್ರೀಯ ಸಂಯುಕ್ತ ಪ್ರಧಾನ ಕಾರ್ಯದರ್ಶಿ ಪವನ ಪುತ್ರ ಬಾದಲ್ ಸಮಾರೋಪ ಭಾಷಣ ಮಾಡುವರು. ಶ್ರೀ ನಿರ್ಭಯಾನಂದ ಸ್ವಾಮೀಜಿ ಸೇರಿದಂತೆ ಅನೇಕ ಗಣ್ಯರು ಭಾಗವಹಿಸುವರು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪರಿಷತ್ತಿನ ಜಿಲ್ಲಾಧ್ಯಕ್ಷ ಲಲಿತ್ ಕುಮಾರ್ ಜೈನ್, ಗೋ. ರುದ್ರಯ್ಯ, ಪ್ರಶಾಂತ್ ಕೋಲ್ಕುಂಟೆ, ಅರುಣ್ ಕುಮಾರ್ ಗುಡ್ಡದಕೆರೆ, ಶ್ರೀ ಹರ್ಷ, ಅಮರೇಶ್ ಇನ್ನಿತರರು ಉಪಸ್ಥಿತರಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮಲ್ಲಿ ಕೆಲವರು ಇದು ಇಂದು ಬಲವಂತವಾಗಿ ಪ್ರಮುಖ ನಿರ್ಧಾರಗಳನ್ನು ಕೈಗೊಳ್ಳಬೇಕಾಗಬಹುದು ಹಾಗೂ ಇದು ನಿಮ್ಮನ್ನು ಉದ್ವೇಗಭರಿತರನ್ನಾಗಿಯೂ ಹಾಗೂ ಗಾಬರಿಯಿರುವವರನ್ನಾಗಿಯೂ ಮಾಡಬಹುದು. ಹೆಣಟಿಜಜಜಿಟಿಜಜಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ. ಧರ್ಮಕಾರ್ಯಗಳು / ಹವನಗಳು / ಮಂಗಳಕರ ಸಮಾರಂಭಗಳನ್ನು ಮನೆಯಲ್ಲಿ ಕೈಗೊಳ್ಳಲಾಗುವುದು

### ವೃಷಭ ರಾಶಿ

ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

### ಮಿಥುನ ರಾಶಿ

ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್ಗಳು ಮತ್ತು ಮ್ಯೂಚುವಲ್ ಫಂಡ್ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ ಇಂದು ನೀವು ನಿಮ್ಮ ಕೆಲಸಗಳನ್ನು ಸಮಯದಲ್ಲೇ ಪೂರೈಸಲು ಪ್ರಯತ್ನಿಸಬೇಕು.

### ಕರ್ಕ ರಾಶಿ

ನಿಮ್ಮನ್ನು ಫಿಟ್ ಆಗಿ ಮತ್ತು ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೋರಿಯ ಆಹಾರವನ್ನು ತಪ್ಪಿಸಿ ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ. ಮಗಳ ಅನಾರೋಗ್ಯ ನಿಮ್ಮ ಮನಸ್ಸಿಗೆ ಅಸಮಾಧಾನ ತರುತ್ತದೆ. ಅವಳು ತನ್ನ ಅನಾರೋಗ್ಯದ ಜೊತೆ ಹೋರಾಡುತ್ತಿದ್ದ ಹಾಗೆ ಅವಳ ಚೈತನ್ಯವನ್ನು ಉದ್ದೀಪನಗೊಳಿಸಲು ಅವಳಿಗೆ ನಿಮ್ಮ ಪ್ರೀತಿಯನ್ನು ನೀಡಿ.

### ಸಿಂಹ ರಾಶಿ

ನೀವು ಸಾಮಾನ್ಯವಾಗಿ ಇರುವುದಕ್ಕಿಂತ ಕಡಿಮೆ ಚೈತನ್ಯವನ್ನು ಇಂದು ಕಾಣುತ್ತೀರಿ ನಿಮ್ಮ ಮೇಲೆ ನೀವೇ ಹೆಚ್ಚುವರಿ ಕೆಲಸಕ್ಕೆ ಒತ್ತಡ ಹೇರಬೇಡಿ – ಸ್ವಲ್ಪ ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ನಿಮ್ಮ ಕೆಲಸಗಳನ್ನು ಇನ್ನೊಂದು ದಿನಕ್ಕೆ ವರ್ಗಾಯಿಸಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ನಿಮ್ಮ ಆರೋಗ್ಯವನ್ನು ಹದಗೆಡಿಸುತ್ತದೆ ಮತ್ತು ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸಹ ಹದಗೆಡಿಸುತ್ತದೆ.

### ಕನ್ಯಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್ಗೆ ಭೇಟಿ ನೀಡಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ಕಾರ್ಡ್ ನಲ್ಲಿ ಪ್ರಣಯಶಾಲಿ ಪ್ರಭಾವಗಳು ಹೆಚ್ಚಾಗಿವೆ. ನಿಮ್ಮ ಗತಕಾಲದ ಯಾರೆ ನಿಮ್ಮನ್ನು ಸಂಪರ್ಕಿಸಬಹುದು ಮತ್ತು ಇದನ್ನು ಒಂದು ಸ್ಮರಣಿಯ ದಿನವಾಗಿಸಬಹುದು.

### ತುಲಾ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು. ಅವನು(ಳು) ನಿಮ್ಮ ನಿರೀಕ್ಷೆಗಳನ್ನು ಪೂರೈಸುವುದು ನಿಮ್ಮ ಕನಸನ್ನು ನನಸಾಗಿಸಬಹುದು

### ವೃಶ್ಚಿಕ ರಾಶಿ

ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ.

### ಧನು ರಾಶಿ

ನಿಮ್ಮ ಮನಸ್ಸಿನಲ್ಲಿ ಸಕಾರಾತ್ಮಕ ಆಲೋಚನೆಗಳನ್ನು ತನ್ನಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ನಿಮ್ಮ ಹತ್ತಿರದ ಜನರು ವೈಯಕ್ತಿಕ ಮಟ್ಟದಲ್ಲಿ ನಿಮಗೆ ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ.

### ಮಕರ ರಾಶಿ

ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ. ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧ ಯಾರಾದರೊಬ್ಬರ ಹಸ್ತಕ್ಷೇಪದಿಂದ ಹಾಳಾಗಬಹುದು. ನಿಮ್ಮ ಅಭಿಪ್ರಾಯ ಕೇಳಿದಾಗ ಅದನ್ನು ವ್ಯಕ್ತಪಡಿಸಲು ನಾಚಬೇಡಿ ಇದಕ್ಕೆ ನಿಮಗೆ ತುಂಬ ಮೆಚ್ಚುಗೆ ಸಿಗುತ್ತದೆ.

### ಕುಂಭ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ನಿಮ್ಮ ಜ್ಞಾನದಾಹ ನಿಮಗೆ ಹೆಣಟಿಜಜಜಿಟಿಜಜಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ.


### ಮೀನ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

# ಶಿಕ್ಷಣ ಅರ್ಧಕ್ಕೆ ನಿಲ್ಲಿಸಿದರೆ ಬಿ. ಆರ್. ಅಂಬೇಡ್ಕರ್ ಗೆ ಅಪಮಾನ ಮಾಡಿದಂತೆ: ಜಿ. ಬಿ. ವಿನಯ್ ಕುಮಾರ್

**ದಾವಣಗೆರೆ:** ನೀವು ಶಿಕ್ಷಣ ಅರ್ಧಕ್ಕೆ ನಿಲ್ಲಿಸಿದರೆ ದಾದಾ ಸಾಹೇಬ್ ಡಾ. ಬಿ. ಆರ್. ಅಂಬೇಡ್ಕರ್ ಅವರಿಗೆ ಎಸಗುವ ದ್ರೋಹ ಹಾಗೂ ಅಪಮಾನ ಎಂದು ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷರೂ ಆದ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಹೇಳಿದರು.

ಮಾಯಕೊಂಡ ಪಟ್ಟಣದ ಎ. ಕೆ. ಕಾಲೋನಿಯಲ್ಲಿ ಆಯೋಜಿಸಿದ್ದ ಡಾ. ಬಿ. ಆರ್. ಅಂಬೇಡ್ಕರ್ ಮತ್ತು ಬಾಬು ಜಗಜೀವನ್ ರಾಂರವರ ಜಯಂತ್ಯೋತ್ಸವ ಹಾಗೂ ಡಿಎಸ್ ಎಸ್ ಗ್ರಾಮ ಶಾಖೆಯ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಡಾ. ಬಿ. ಆರ್. ಅಂಬೇಡ್ಕರ್ ಅವರು ಉತ್ತಮ ಶಿಕ್ಷಣ ಪಡೆದರೆ ಎಲ್ಲವನ್ನೂ ಸಾಧಿಸಬಹುದು ಎಂದು ಹೇಳಿದ್ದರು. ಅವರ ಬಳಿ ಲೆಕ್ಕವಿಲ್ಲದಷ್ಟು ಪುಸ್ತಕ ಇತ್ತು.



ಜ್ಞಾನ ಸಂಪಾದನೆಯಿಂದ ಅಂಬೇಡ್ಕರ್ ಅವರು ವಿಶ್ವವೇ ತಿರುಗಿ ನೋಡುವಂತ ಸಾಧನೆ ಮಾಡಿದರು ಎಂದು ಬಣ್ಣಿಸಿದರು.

ಅಂಬೇಡ್ಕರ್ ಜಯಂತಿ ಮಾಡುವ ಉದ್ದೇಶ ಕೇವಲ ಭಾಷಣ ಮಾಡುವುದಲ್ಲ. ಕನಿಷ್ಠ ಎಂದರೂ ಪದವಿ ಪಡೆದು ದಾವಣಗೆರೆ ವಿವಿಯಲ್ಲಿ ಸ್ನಾತಕೋತ್ತರ ಪದವಿ ಪಡೆಯಿರಿ. ನಿಮ್ಮ ಮಕ್ಕಳು ಐಎಎಸ್, ಕೆಎಎಸ್ ಮಾಡುತ್ತಾರೆ ಎಂದರೆ ನಮ್ಮ ಬಳಿಗೆ ಕಳುಹಿಸಿ. ನಮ್ಮ ಕೈಯಲ್ಲಾದಷ್ಟು ಸಹಾಯ ಮಾಡುತ್ತೇವೆ ಎಂದು ಹೇಳಿದರು.

ಮಕ್ಕಳಿಗೆ ಪುಸ್ತಕ ಓದುವ ಹವ್ಯಾಸ ಬೆಳೆಸಿ. ಕನಿಷ್ಠ ಎಂದರೂ 20ರಿಂದ 30 ಪುಸ್ತಕಗಳನ್ನು ಕೊಡಿ. ಓದಲು ಹೇಳಿ. ಮನೆ, ವಾಹನ, ಹೊಲ, ಕೆಲಸ ಇಲ್ಲವೆಂದರೂ ಪರವಾಗಿಲ್ಲ ದೊಡ್ಡ ಕನಸು ಕಾಣಬೇಕು. ಮುಂದೊಂದು ದಿನ ಎಂಪಿ, ಶಾಸಕ, ಸಚಿವರಾಗುತ್ತೇಂಬ ಕನಸು ಕಂಡರೆ ಜೀವನದಲ್ಲಿ ಏನನ್ನಾದರೂ ಸಾಧಿಸಿಯೇ ಸಾಧಿಸುತ್ತೀರಿ. ಶಿಕ್ಷಣ ಮತ್ತು ಜ್ಞಾನದಿಂದ ಮಾತ್ರ ಜೀವನದಲ್ಲಿ ಅಂದುಕೊಂಡ ಗುರಿ ಸಾಧಿಸಬಹುದು. ಇದು ಡಿಜಿಟಲ್ ಯುಗ. ಎಲ್ಲವೂ ಕೈಬೆರಳಲ್ಲೇ ಸಿಗುತ್ತದೆ. ಸತತ ಪರಿಶ್ರಮ, ಕಠಿಣ ಅಭ್ಯಾಸದಿಂದ ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮಾಯಕೊಂಡ ಆಸ್ಪತ್ರೆಯಲ್ಲಿ ಕಳೆದ ಆರು ತಿಂಗಳಿನಿಂದ ವೈದ್ಯರೇ ಇಲ್ಲವಂತೆ. ವಿದ್ಯುತ್ ಹೋಗುವುದು ಸಾಮಾನ್ಯವಾಗಿಬಿಟ್ಟಿದೆ. ನಾವು ಯಾವ ಶತಮಾನದಲ್ಲಿ ಬದುಕುತ್ತಿದ್ದೇವೆ ಎಂಬ ಪ್ರಶ್ನೆ ಎದ್ದಿದೆ. 24 ಗಂಟೆ ವಿದ್ಯುತ್ ಜನರಿಗೆ ಕೊಡಿಸುವ ಹಾಗೂ ವೈದ್ಯರನ್ನು ಕರೆತರುವ ಶಕ್ತಿ ನಮ್ಮಲ್ಲಿ ಇಲ್ಲದಂತಾಗಿದೆ. ಇದು ಬೇಸರದ ಸಂಗತಿ ಎಂದು ಹೇಳಿದರು.

ಶಾಸಕರು ಏನು ಮಾಡಲು ಆಗುತ್ತದೆ ಎಂದು ಜನರು ಹೇಳುತ್ತಾರೆ. ನಾವು ಅಸಹಾಯಕವಾಗಿ ಬದುಕುವಂಥ ಸ್ಥಿತಿಯಲ್ಲಿದ್ದೇವೆ. ನೀವು ಆರಿಸಿ ಕಳುಹಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಸಂಸದರು ಇದ್ದಾರೆ. ಎಲ್ಲಾ ಬೇಡಿಕೆ ಈಡೇರಿಸುತ್ತೇವೆ, ನಿಮ್ಮ ಸಮಸ್ಯೆ ಪರಿಹರಿಸುತ್ತೇವೆ ಎಂದು ಹೇಳಿದ್ದರು. ಆದ್ರೆ, ನಿಮ್ಮ ಸಮಸ್ಯೆಗಳು ಪರಿಹಾರ ಆಗಿವೆಯಾ? ಒಮ್ಮೆಯಾದರೂ ಇಲ್ಲಿಗೆ ಬಂದು ನಿಮ್ಮ ಸಂಕಷ್ಟ ಕೇಳಿದ್ದಾರಾ ಎಂದು ಪ್ರಶ್ನಿಸಿದರು.

ಕಾರ್ಯಕ್ರಮದಲ್ಲಿ ರೈತ ಹೋರಾಟಗಾರರಾದ ಪ್ರತಾಪ್ ಗೌಡ್ರು, ಅಶೋಕ್, ಹಿಂಡಸಗಟ್ಟೆ ಹನುಮಂತಪ್ಪ, ಟಿ. ರವಿಕುಮಾರ್, ಮಧುಕುಮಾರ್, ಕಲ್ಲೇಶ್, ರಾಘವೇಂದ್ರ ಮತ್ತಿತರರು ಹಾಜರಿದ್ದರು.

**ಕೆಟ್ಟು ನಿಂತ ಶುದ್ಧ ಕುಡಿಯುವ ನೀರಿನ ಘಟಕ ಗ್ರಾ.ಪಂ ವಿರುದ್ಧ ಸ್ಥಳೀಯರಿಂದ ಆಕ್ರೋಶ**

# ಒಂದು ವರ್ಷದಿಂದ ಕುಡಿವ ನೀರಿನ ಘಟಕ ದುರಸ್ತಿ

**ಹಾಸನ :** ಮದಘಟ್ಟ ಗ್ರಾಮದಲ್ಲಿ ಶುದ್ಧ ಕುಡಿವ ನೀರಿನ ಘಟಕ ದುರಸ್ತಿ ಕಂಡಿದ್ದು, ಸ್ಥಳೀಯ ನಿವಾಸಿಗಳು ಶುದ್ಧ ಕುಡಿವ ನೀರಿಗೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಗ್ರಾಮದ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಬೇಲೂರು ತಾಲ್ಲೂಕಿನ ಬಿಕ್ಕೋಡು ಸಮೀಪದ ಮದಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮದಘಟ್ಟ ಗ್ರಾಮದಲ್ಲಿ ಕಳೆದ ಒಂದು ವರ್ಷದಿಂದ ಶುದ್ಧ ಕುಡಿವ ನೀರಿನ ಘಟಕ ದುರಸ್ತಿಯಾಗಿದ್ದು, ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯದಿಂದ ಯಾರ ಬಳಕೆಗೆ ಬಾರದೆ ಅನುಪಯುಕ್ತವಾಗಿ ತುಕ್ಕು ಹಿಡಿಯುತ್ತಿದೆ.

ಮನೆಗಳಲ್ಲಿನ ಮಕ್ಕಳು ಹಾಗೂ ಶಾಲಾ, ಕಾಲೇಜುಗಳಿಗೆ ಹೋಗುವ ಮಕ್ಕಳು ಬೇರೆ ಕೊಳವೆ ಬಾವಿ, ಟ ನೀರನ್ನು ಕುಡಿಯುವುದರಿಂದ ನೆಗಡಿ, ಕೆಮ್ಮು, ಜ್ವರ ಮೊದಲಾದ ರೋಗಗಳ ಭಯ ಕಾಡುತ್ತಿದೆ. ಆರು ತಿಂಗಳಿಂದ ಕೆಟ್ಟು ನಿಂತಿರುವ ನೀರಿನ ಶುದ್ಧಿಕರಣ ಘಟಕ ಶೀಘ್ರ ಜನರ ಉಪಯೋಗಕ್ಕೆ ಬರುವಂತೆ ಸರಿಪಡಿಸಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಈ ವೇಳೆ ಮದಘಟ್ಟ ಗ್ರಾಮದ ರಘು, ನಂದೀಶ್, ಮಂಜು,ತೋಪಯ್ಯ, ಸತೀಶ, ತಮಯ್ಯ ಸೇರಿದಂತೆ ಇತರರು ಹಾಜರಿದ್ದರು.

**ಇತ್ತೀಚಿನ ದಿನಗಳಲ್ಲಿಅಂತರ್ಜಲಮಟ್ಟ ಕುಸಿದಿದ್ದು, ಸಾವಿರ ಅಡಿಗಳಷ್ಟು ಒಳಗಿನಿಂದ ಬರುವ ನೀರು ಕುಡಿಯಲು ಯೋಗ್ಯವಾಗಿಲ್ಲ. ಗ್ರಾಮದಲ್ಲಿ ಶುದ್ಧ ಕುಡಿವ ನೀರಿನ ಘಟಕ ಸರಕಾರದಿಂದ ನಿರ್ಮಾಣ ಮಾಡಿದ್ದರೂ ಜನಸಾಮಾನ್ಯರಿಗೆ ಯಾವುದೇ ರೀತಿ ಪ್ರಯೋಜನಕ್ಕೆ ಬರುತ್ತಿಲ್ಲ. ಸರಕಾರ ಲಕ್ಷಾನುಗಟ್ಟಲೆ ಹಣ ಖರ್ಚು ಮಾಡಿ ನಿರ್ಮಿಸಿದ ಶುದ್ಧ ನೀರಿನ ಘಟಕಗಳನ್ನು ನಿರ್ವಹಣೆ ಮಾಡುವಲ್ಲಿ ಸಂಪೂರ್ಣ ವಿಫಲವಾಗಿರುವುದು ಸರಿಯಲ್ಲ. ತಕ್ಷಣವೇ ಇಲ್ಲಿನ ಶುದ್ಧ ಕುಡಿವ ನೀರಿನ ಘಟಕ ಸರಿಪಡಿಸಲು ಮುಂದಾಗಬೇಕು. ರೂಪೇಶ್ ಉಪಾಧ್ಯಕ್ಷರು, ಮದಘಟ್ಟ ಗ್ರಾಮ ಪಂಚಾಯಿತಿ .**

# ಎ.28ಕ್ಕೆ ಹೆಚ್‌ಪಿವಿ ಲಸಿಕ ಅಭಿಯಾನ

**ದಾವಣಗೆರೆ:** ಸುಕ್ಷೇಮ ಆಸ್ಪತ್ರೆ, ರೋಟರಿ ದಾವಣಗೆರೆ, ಕರ್ನಾಟಕ ಹಿಮೋಫಿಲಿಯಾ ಸೊಸೈಟಿ ಮತ್ತು ಪರಿವರ್ತನಾ ವೇದಿಕೆ ಇವರ ಸಹಯೋಗದಲ್ಲಿ ಏ. 28ರಂದು ಹಿಮೋಫಿಲಿಯಾ ದಿನಾಚರಣೆ ಪ್ರಯುಕ್ತ ಬೆಳಗ್ಗೆ 11 ರಿಂದ 6 ಗಂಟೆವರೆಗೆ ನಗರದ ಸುಕ್ಷೇಮ ಆಸ್ಪತ್ರೆಯಲ್ಲಿ ಹೆಚ್‌ಪಿವಿ ಲಸಿಕ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಭವಿಷ್ಯದಲ್ಲಿ ಬರಬಹುದಾದ ಕ್ಯಾನ್ಸರ್‌ನ್ನು ತಡೆಗಟ್ಟುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಲಾಗಿದೆ.

# ಮಕ್ಕಳಿಗೆ ಬೇಸಿಗೆ ಶಿಬಿರಗಳು ಅತ್ಯಂತ ಅವಶ್ಯಕ ಸೂಗುರು ಗ್ರಾ.ಪಂ. ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ ವೀರೇಶ್ ಕ್ಯಾತನಕೊಪ್ಪ ಇಂಗಿತ



**ಶಿವಮೊಗ್ಗ:** ಮಕ್ಕಳಿಗೆ ಬೇಸಿಗೆ ಶಿಬಿರಗಳು ಅತ್ಯಂತ ಅವಶ್ಯಕ ಎಂದು ಸೂಗುರು ಗ್ರಾಮ ಪಂಚಾಯಿತಿಯ ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ ವೀರೇಶ್ ಕ್ಯಾತನಕೊಪ್ಪ ಹೇಳಿದರು.

ಅವರು ಸೂಗುರು ಗ್ರಾಮ ಪಂಚಾಯತಿಯ ಡಿಜಿಟಲ್ ಗ್ರಂಥಾಲಯ ಮಾಹಿತಿ ಅರಿವು ಕೇಂದ್ರದಲ್ಲಿ ಆಯೋಜಿಸಿದ್ದ ಗ್ರಾಮೀಣ ಮಕ್ಕಳ ಬೇಸಿಗೆ ಶಿಬಿರದಲ್ಲಿ ಮಾತನಾಡುತ್ತಾ, ಬೇಸಿಗೆ ಶಿಬಿರಗಳಲ್ಲಿ ಗ್ರಾಮೀಣ ಮಕ್ಕಳು ಭಾಗವಹಿಸುವುದರಿಂದ ಕ್ರಿಯಾಶೀಲ ಹಾಗೂ ಸೃಜನಶೀಲ ವ್ಯಕ್ತಿತ್ವ ವೃದ್ಧಿಸುತ್ತದೆ ಎಂದರು.

ಹೊಸ ಹೊಸ ವಿಷಯಗಳನ್ನು ಮಕ್ಕಳು ಕಲಿಯುವುದರ ಜತೆಯಲ್ಲಿ ದೈಹಿಕ ಮತ್ತು ಮಾನಸಿಕವಾಗಿ ಸದೃಢರಾಗಬೇಕು. ಗುರು ಹಿರಿಯರ ಮಾರ್ಗದರ್ಶನದಲ್ಲಿ ಉತ್ತಮ ಸಾಧನೆ ಮಾಡಬೇಕು ಎಂದು ಹೇಳಿದರು.

ಗ್ರಾಮ ಪಂಚಾಯಿತಿಯ ಅಧ್ಯಕ್ಷೆ ಭಾಗ್ಯಮ್ಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಮಕ್ಕಳಿಗೆ ಹೊಸ ಹೊಸ ಚಟುವಟಿಕೆಗಳನ್ನು ಕಲಿಯಲು ಸೃಜನಶೀಲತೆಯನ್ನು ಮತ್ತು ಕ್ರಿಯಾತ್ಮಕ ಆಲೋಚನೆಗಳನ್ನ ಬೆಳೆಸಿಕೊಳ್ಳಲು ಇಂತಹ ಬೇಸಿಗೆ ಶಿಬಿರಗಳು ಫಲಕಾರಿಯಾಗುತ್ತವೆ ಎಂದರು.

ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಎಸ್ ಜಿ ಮಲ್ಲಿಕಾರ್ಜುನ್ ಮಾತನಾಡುತ್ತಾ, ರಜೆ ವೇಳೆ ಮಕ್ಕಳು ಕೇವಲ ಮೊಬೈಲ್ ಮತ್ತು ಇನ್ನಿತರ ಯಾಂತ್ರಿಕ ಯುಗಕ್ಕೆ ಮಾರು ಹೋಗದೆ, ಇಂತಹ ಬೇಸಿಗೆ ಶಿಬಿರಗಳಿಂದ ಹೆಚ್ಚು ಹೆಚ್ಚು ಕಲಿಯಲು ಅವರಿಗೆ ಅನುಕೂಲವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷ ಮಧು, ಮಾಜಿ ಅಧ್ಯಕ್ಷ ಕೆ ಪಿ ಲೋಹಿತ್, ಓಂಕಾರಪ್ಪ ಎಸ್ ಜಿ, ಮಲ್ಲಿಕಾರ್ಜುನ್, ಸದಸ್ಯರಾದ ರೋಹಿಣಿ, ಪ್ರತಿಭಾ ರಂಗನಾಥ್, ನೇತ್ರಾವತಿ, ಪಂಚಾಯತಿಯ ಪಿಡಿಒ ವಿಜಯಮ್ಮ, ರಮೇಶ್, ಸಿದ್ದೇಶ್, ರಾಘವೇಂದ್ರ, ಕಾರ್ಯದರ್ಶಿ ಪರಶುರಾಮ್, ಅಶ್ವಿನಿ, ಗ್ರಂಥಾಲಯ ಮೇಲ್ವಿಚರಕಜಯಪ್ಪ ಚೇತನ್ ಸೇರಿದಂತೆ ಮತ್ತಿತರರಿದ್ದರು.

# ಶಿಕ್ಷಣಕ್ಕೆ ಸಂಗೀತ, ಸಂಸ್ಕಾರ, ಸಂಸ್ಕೃತಿ ಸ್ಪೂರ್ತಿ– ಶ್ರೀಮತಿ ಲತಾ ಕೇಶವ ಭಟ್ ಎಡಕ್ಕನ್

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಅಂಗ ಸಂಸ್ಥೆ ಕೇರಳ ಗಡಿನಾಡಿನ ಕಲಾಕುಂಚ ಶಾಖೆಯ ಆಶ್ರಯದಲ್ಲಿ ಇತ್ತೀಚಿಗೆ ಕೇರಳ ರಾಜ್ಯದ ಕಾಸರಗೋಡು ಜಿಲ್ಲೆಯ ಮಂಗಲ್ಪಾಡಿಯ ವರಾಹ ಭಜನಾ ಮಂದಿರದ ಸಭಾಂಗಣದಲ್ಲಿ ನಡೆದ ಸುಗಮ ಸಂಗೀತ ಕಾರ್ಯಾಗಾರ ದೀಪ ಹಚ್ಚುವ ಮೂಲಕ ಉದ್ಘಾಟಿಸಿ ಶ್ರೀಮತಿ ಲತಾ ಕೇಶವ ಭಟ್ ಮಾತನಾಡಿ, ಮಕ್ಕಳಲ್ಲಿ ಶಿಕ್ಷಣದ ಜತೆಯಲ್ಲಿ ಶಿಕ್ಷಣಕ್ಕೆ ಸಂಗೀತ, ಸಂಸ್ಕಾರ, ಸಂಸ್ಕೃತಿ ಸ್ಪೂರ್ತಿಯಾಗಲಿದೆ. ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಒತ್ತಡದ ನಡುವೆ ರಜಾ ದಿನಗಳಲ್ಲಿ ಭಕ್ತಿಗೀತೆ, ಭಾವಗೀತೆ, ಜನಪದಗೀತೆ, ಚಲನಚಿತ್ರಗೀತೆಗಳನ್ನು ತೊಡಗಿಸಿಕೊಳ್ಳಬೇಕಾಗಿದೆ ಎಂದು ತಮ್ಮ ಮನದಾಳದ ಅನಿಸಿಕೆ ಹಂಚಿಕೊಂಡರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕೇರಳದ ಗಡಿನಾಡಿನ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಜಯಲಕ್ಷ್ಮಿ ಕಾರಂತ್‌ರವರು ಪ್ರಾಸ್ತಾವಿಕವಾಗಿ ಮಾತನಾಡಿ, ಹೆಚ್ಚಿನ ಸಂಖ್ಯೆಯಲ್ಲಿ ಈ ಸುಗಮ ಸಂಗೀತ ಕಾರ್ಯಾಗಾರದಲ್ಲಿ ಭಾಗವಹಿಸಿದ ಮಕ್ಕಳಿಗೆ, ಅತಿಥಿಗಳಿಗೆ ಸ್ವಾಗತಿಸಿದರು, ಮುಖ್ಯ



ಅತಿಥಿಗಳಾಗಿ ವೇದಿಕೆಯಲ್ಲಿ ಉಪಸ್ಥಿತರಿದ್ದ ಬಾಲಕೃಷ್ಣ ಚೆರುಗೋಳಿ, ಸಂಗೀತ ಸಂಪನ್ಮೂಲ ವ್ಯಕ್ತಿಗಳಾದ ಪುತ್ತೂರಿನ ಉದಯಗಾನ ಸಂಗೀತ ಶಾಲೆಯ ಶಿಕ್ಷಕಿಯರಾದ ಶ್ರೀಮತಿ ಸುಮನಾರಾವ್ ಮತ್ತು ಕುಮಾರಿ ಸುಪ್ರಜಾ ರಾವ್ ಸಂಗೀತ ಅಚ್ಚುಕಟ್ಟಾಗಿ ಸಂಗೀತ ಸಂಪ್ರಾದಾಯಕ ರಾಗ, ತಾಳದೊಂದಿಗೆ ತರಬೇತಿ ನೀಡಿದರು. ಕೇರಳ ಗಡಿನಾಡಿನಲ್ಲಿ ಕನ್ನಡ ಮಕ್ಕಳು, ಅತ್ಯಾಸಕ್ತಿಯಿಂದ, ತಾಳ್ಮೆಯಿಂದ ಸಂಗೀತ ತರಬೇತಿ ಪಡೆದಿದ್ದು ಶ್ಲಾಘನೀಯ ಎಂದರು.

ಚೇತನ ಹೆಬ್ಬಾರ್‌ರವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಸಮಾರಂಭದಲ್ಲಿ ಶ್ರೀಮತಿ ಜಯಲಕ್ಷ್ಮೀ ಚಂದ್ರಶೇಖರ ಹೊಳ್ಳ ನಿರೂಪಿಸಿದರು. ಕೊನೆಯಲ್ಲಿ ಚಂದನ್ ಕಾರಂತ್ ವಂದಿಸಿದರು.

# ಪರಿವರ್ತನೆಯಿಂದ ಜೀವನದ ಉನ್ನತಿ ಸಾಧ್ಯ : ನ್ಯಾ.ದಾಕ್ಷಾಯಿಣಿ

**ಹಾಸನ :** ನಾವು ಮಾಡುವ ತಪ್ಪುಗಳಿಗೆ ನಮಗಾಗುವ ತಪ್ಪಿನ ಅರಿವು ಮತ್ತು ಪಶ್ಚತಾಪವೆ ಪರಿವರ್ತನೆಯ ಮೊದಲ ಹೆಜ್ಜೆಯಾಗಿದೆ. ನಮ್ಮ ತಪ್ಪುಗಳಿಗೆ ಪರಿವರ್ತನೆಯನ್ನು ಹಲವಾರು ಮೂಲಗಳಿಂದ ಮಾಡಿಕೊಳ್ಳಬಹುದಾಗಿದೆ. ಬಾಹ್ಯ ಪ್ರೇರಣೆಯೂ ನಮ್ಮನ್ನು ಆಂತರಿಕವಾಗಿ ಪರಿವರ್ತನೆಯಾಗಲು ಕಾರಣವಾಗಬಲ್ಲದು ಅದಕ್ಕೆ ಧ್ಯಾನ, ಯೋಗಾಭ್ಯಾಸ, ಪುಸ್ತಕಗಳನ್ನು ಓದುವ ಹವ್ಯಾಸ, ಚಿತ್ರಕಲೆ, ಇನ್ನಿತರ ಕಳೆಗಳಂತಹ ಉತ್ತಮ ಅಭಿರುಚಿಗಳು ಸಹಕಾರಿಯಾಗಿವೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರಾದ ದಾಕ್ಷಾಯಿಣಿ ಜಿ.ಕೆ. ತಿಳಿಸಿದರು.




ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಜಿಲ್ಲಾ ಕಾರಾಗೃಹ ಇವರುಗಳ ಸಂಯುಕ್ತಾಶ್ರಯದಲ್ಲಿ ಬಂಧಿವಾಸಿಗಳಿಗೆ ಏರ್ಪಡಿಸಿದ್ದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಇವರು ಆಕಸ್ಮಿಕ ಮತ್ತು ಅನಿವಾರ್ಯ ಘಟನೆಗಳಿಂದಾಗಿ ಆದ ತಪ್ಪುಗಳಿಗೆ ಪರಿವರ್ತನೆಯ ಮೂಲಕ ಪರಿಹಾರವನ್ನು ಕಂಡುಕೊಳ್ಳಬಹುದು ಬಂಧೀಖಾನೆಯಿಂದ ಹೊರ ಬಂದ ನಂತರ ಹೊಸ ಜೀವನವನ್ನು ಸೃಷ್ಟಿಸಿಕೊಳ್ಳಲು ಅವಕಾಶವಿದೆ. ಕೃತ್ಯಗಳಿಗೆ ಶಿಕ್ಷೆ ನೀಡುವ ಅಥವಾ ಬಿಡುಗಡೆ ಮಾಡುವ ಅಧಿಕಾರ ನ್ಯಾಯಾಲಯಗಳಿಗೆ ಮಾತ್ರವೇ ಇದೆ. ಆದರೆ ಪರಿವರ್ತನೆಯನ್ನು ನಮಗೆ ನಾವೇ ಹೊಂದಬೇಕಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಹಿರಿಯ ವಕೀಲರಾದ ಬಿ. ಚಂದ್ರಶೇಖರ್ ಅವರು ಮಾತನಾಡಿ ಸಮಸ್ಯೆಗಳ ಮೂಲವನ್ನು ಅರಿತಾಗ ಮಾತ್ರವೇ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳಲು ಸಾಧ್ಯ. ಆಗಿರುವ ತಪ್ಪುಗಳ ಬಗ್ಗೆ ಯೋಚಿಸುವ ಬದಲು ಮುಂದಾಗುವುದರ ಬಗ್ಗೆ ಯೋಚಿಸಿದಲ್ಲಿ ನೆಮ್ಮದಿಯಿಂದ ಕೂಡಿದ ಜೀವನವನ್ನು ಸಾಗಿಸಲು ಸಾಧ್ಯವಿದೆ. ಎಲ್ಲರೂ ಬಂಧಿಖಾನೆಯಲ್ಲಿರುವುದನ್ನು ಶಿಕ್ಷೆಯೆಂದು ಭಾವಿಸದೆ ಪರಿವರ್ತನೆ ಮತ್ತು ಸುಧಾರಣೆಯ ಕೇಂದ್ರವೆಂದು ಭಾವಿಸಿ ಪರಿವರ್ತನೆ ಹೊಂದುವ ಮೂಲಕ ಬೇಗ ಬಿಡುಗಡೆಯಾಗಿ ಹೊಸ ಜೀವನ ಕಂಡುಕೊಳ್ಳಬೇಕೆಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರಾಗೃಹದ ಅಧೀಕ್ಷಕರಾದ ಎಚ್.ಎ ಪರಮೇಶ್, ಜೈಲರ್ ಅನಿಲ್ ಕುಮಾರ್, ವಕೀಲರಾದ ರಾಮ, ಇತರರು ಉಪಸ್ಥಿತರಿದ್ದರು.

# ಮತ್ತೆ ಅರಳಿದವು ಬಿತ್ತಿ ಪತ್ರಗಳ ಪ್ರದರ್ಶನ

**ದಾವಣಗೆರೆ:** ನಗರದ ದೃಶ್ಯಕಲಾ ಮಹಾವಿದ್ಯಾಲಯದಲ್ಲಿ ಏ.28ರಂದು ಬೆಳಗ್ಗೆ 11 ಗಂಟೆಗೆ ಮತ್ತೆ ಅರಳಿದವು ಬಿತ್ತಿ ಪತ್ರಗಳ ಪ್ರದರ್ಶನ ಕಾರ್ಯಕ್ರಮವು ಆಯೋಜಿಸಲಾಗಿದೆ. ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಜೈರಾಜ್ ಎಂ. ಚಿಕ್ಕಪಾಟೀಲ್ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮವನ್ನು ದೃಶ್ಯಕಲಾ ಮಹಾವಿದ್ಯಾಲಯದ ನಿವೃತ್ತ ಸಂಯೋಜನಾಧಿಕಾರಿ ಎಲ್ ಕೆ ಹನುಮಂತಚಾರಿ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಯಾಗಿ ಮಂಜುನಾಥ್ ಕಾಯಕದ ಪಾಲ್ಗೊಳ್ಳಲಿದ್ದು, ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಸತೀಶ್ ಪಿ. ವಲ್ಲೇಪುರಿ ಉಪಸ್ಥಿತರಿರುವರು. ಬೋಧನಾ ಸಹಾಯಕ ಎಸ್. ಹೆಚ್ ಹರೀಶ್ ಪ್ರಸ್ತಾವಿಕ ನುಡಿಯಲಿದ್ದಾರೆ.

# ಜಿಎಫ್‌ಜಿಸಿ ಕಾಲೇಜಿನ ವಿಶೇಷ ವಾರ್ಷಿಕ ಶಿಬಿರ

**ದಾವಣಗೆರೆ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಬೇತೂರು ಗ್ರಾಮ ಪಂಚಾಯಿತಿ ಹಾಗೂ ಬೇತೂರು ಗ್ರಾಮಸ್ಥರ ಸಂಯುಕ್ತಾಶ್ರಯದಲ್ಲಿ 2024–25 ನೇ ಸಾಲಿನ ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ವಾರ್ಷಿಕ ಶಿಬಿರ ಸಾಮಾಜಿಕ ಸಾಮರಸ್ಯದೆಡೆಗೆ ಯುವಜನತೆ ಕಾರ್ಯಕ್ರಮವು ಏಪ್ರಿಲ್ 28 ರಿಂದ ಮೇ 4ರ ವರೆಗೆ ದಾವಣಗೆರೆ ತಾಲೂಕಿನ ಬೇತೂರು ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆ, ಶ್ರೀ ತರಳಬಾಳು ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ.ಏಪ್ರಿಲ್ 28ರಂದು ಬೆಳಗ್ಗೆ 11 ಗಂಟೆಗೆ ಸ್ವಯಂಸೇವಕರ ನೋಂದಣಿ ಮತ್ತು ಗ್ರಾಮದಲ್ಲಿ ಪಥಸಂಚಲ ನಡೆಯಲಿದೆ. ಸಂಜೆ 6 ಗಂಟೆಗೆ ನಡೆಯುವ ಉದ್ಘಾಟನಾ ಸಮಾರಂಭವನ್ನು ಸಚಿವ ಎಸ್. ಎಸ್ ಮಲ್ಲಿಕಾರ್ಜುನ್ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲ ಪ್ರೊ.ಸಿ ಬಸವರಾಜ್ ತಹಸಿಲ್ದಾರ್ ವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಸಂಯೋಜನಾಧಿಕಾರಿ ಡಾ. ಅಶೋಕ್ ಕುಮಾರ್ ವಿ. ಪಾಳೇದ ಸೇರಿದಂತೆ ಮತ್ತಿತರರು ಪಾಲ್ಗೊಳ್ಳಲಿದ್ದಾರೆ.ನಂತರ ಪ್ರತಿದಿನವೂ ಸಂಜೆ 6:30ಕ್ಕೆ ವೇದಿಕೆ ಕಾರ್ಯಕ್ರಮಗಳು ಜರಗಲಿದ್ದು, ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ. ಮೇ 4ರಂದು ನಡೆಯುವ ಸಮಾರೋಪ ಸಮಾರಂಭವು ಬೆಳಗ್ಗೆ 10.30 ಕ್ಕೆ ಕಾಲೇಜಿನ ಪ್ರಾಂಶುಪಾಲರಾದ ಬಸವರಾಜ್ ಸಿ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಜರಗಲಿದ್ದು ಐಕ್ಯೂಎಸಿ ಸಂಚಾಲಕ ಡಾ.ಜೆ ಪಿ ಗುರುರಾಜ್ ಉಪಸ್ಥಿತರಿರುವರು. ವಿಶೇಷ ಆಹ್ವಾನಿತರಾಗಿ ಸಂಯೋಜನಾಧಿಕಾರಿ ಡಾ. ಅಶೋಕ್ ಕುಮಾರ್ ವಿ ಪಾಳ್ಯದ ಪಾಲ್ಗೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಗ್ರಾಮ ಪಂಚಾಯತ್ ಅಧ್ಯಕ್ಷ ಕೆಎಂ ರೇವಣಸಿದ್ದಪ್ಪ ಸೇರಿದಂತೆ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ.

# ಚೆಸ್ ಬೇಸಿಗೆ ತರಬೇತಿ ಶಿಬಿರ,

**ಶಿವಮೊಗ್ಗ:** ಚಾಣಕ್ಯ ಚೆಸ್ ಸ್ಕೂಲ್ ವತಿಯಿಂದ ಶಿವಮೊಗ್ಗ ನಗರದ ಗೋಪಾಲ ಗೌಡ ಬಡಾವಣೆ ಲಾಸ್ಟ್ ಸಿಟಿ ಬಸ್ ಸ್ಟಾಪ್ ಎದುರು ಚಾಣಕ್ಯ ಚೆಸ್ ಸ್ಕೂಲ್ ನಲ್ಲಿ ದಿನಾಂಕ 02ಮೇ 2025 ರಿಂದ 11 ಮೇ ವರೆಗೆ, ಬೆಳಿಗ್ಗೆ 10.30ಯಿಂದ 1.00 ರ ವರೆಗೆ 6 ವರ್ಷ ಮೇಲ್ಪಟ್ಟ ಎಲ್ಲಾ ವಯಸ್ಕರಿಗೂ ಚೆಸ್ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ, ಆಸಕ್ತರು ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ,9845830133, 9741591672

ಶೀಘ್ರ ಮಧ್ಯಸ್ಥಿಕೆ ಅರಿವು ಕಿಟ್ ವಿತರಣಾ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಅಭಿಮತ

# ಪ್ರಾರಂಭಿಕ ಹಂತದಲ್ಲೇ ಅಂಗವೈಕಲ್ಯ ಗುರುತಿಸುವಂತಾಗಬೇಕು

**ಚಿತ್ರದುರ್ಗ :** ಪ್ರಾರಂಭಿಕ ಹಂತದಲ್ಲೇ ಅಂಗವೈಕಲ್ಯ ಗುರುತಿಸುವಂತಾಗಬೇಕು. ಯಾವುದೇ ಕಾರಣಕ್ಕೂ ಕ್ಷೇತ್ರಮಟ್ಟದಲ್ಲಿ ಅಂಗವಿಕಲರಾಗಿ ಉಳಿಯಬಾರದು. ಪ್ರಾರಂಭಿಕ ಹಂತದಲ್ಲಿಯೇ ಅಂಗವಿಕಲತೆಯನ್ನು ಗುರುತಿಸಿದಾಗ ಮಾತ್ರ ಚಿಕಿತ್ಸೆ ಹಾಗೂ ಗುಣಪಡಿಸಲು ಸಾಧ್ಯವಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಈಚೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ದಾವಣಗೆರೆ ಸಂಯೋಜಿತ ಪ್ರಾದೇಶಿಕ ಕೇಂದ್ರ, ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಎಂ.ಆರ್. ಡಬ್ಲ್ಯೂ, ವಿ.ಆರ್.ಡಬ್ಲ್ಯೂ, ಯು.ಆರ್. ಡಬ್ಲ್ಯೂಗಳಿಗೆ ವಿಶೇಷಚೇತನ ಮಕ್ಕಳನ್ನು ಪ್ರಾರಂಭಿಕ ಹಂತದಲ್ಲಿ ಗುರುತಿಸುವಿಕೆ ಹಾಗೂ ಶೀಘ್ರ ಮಧ್ಯಸ್ಥಿಕೆ ಅರಿವು ಕಿಟ್ ವಿತರಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಾರಂಭಿಕ ಹಂತದಲ್ಲಿಯೇ ಅಂಗವೈಕಲ್ಯ ಗುರುತಿಸಿದರೆ ಅವರಿಗೆ ಯಾವ್ಯಾವ ಸೇವೆಗಳು, ಸೌಲಭ್ಯಗಳು ನೀಡಬಹುದಾಗಿದೆ ಎಂಬುವುದು ಗೊತ್ತಾಗಲಿದೆ. ಅಂಗವೈಕಲ್ಯಕ್ಕೆ ಅನುಗುಣವಾಗಿ ಚಿಕಿತ್ಸೆ ನೀಡಬಹುದಾಗಿದೆ. ಇದರ ಜೊತೆಗೆ ಬೆಂಬಲ ನೀಡುವ ಪಾಲಕರಿಗೆ ಕೌನ್ಸಿಲ್ ಕೊಡುವುದು, ನಂತರ ಯಾವ ಶಾಲೆಗೆ ಪ್ರವೇಶಾತಿ ಪಡೆಯಬೇಕು ಎಂಬ ಸಿದ್ಧತೆ-ಯ ಬಗ್ಗೆ ತಿಳಿದುಕೊಳ್ಳುವುದು ಸಹ ಬಹಳ ಮುಖ್ಯವಾಗಿದೆ ಎಂದು ತಿಳಿಸಿದರು.

ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ



ಅಂಗನವಾಡಿ ಕಾರ್ಯಕರ್ತೆಯರು ತಾಯಿ ಗರ್ಭಾವಸ್ಥೆಯಲ್ಲೇ ಮಗುವಿನ ಬೆಳವಣಿಗೆ ತಿಳಿದುಕೊಳ್ಳುವುದು ಉತ್ತಮ. ಮನೆ ಭೇಟಿ, ಚುಚ್ಚುಮದ್ದು, ಆಹಾರ ಸೇವನೆ, ಹೆರಿಗೆ ಸಿದ್ಧತೆ ಕುರಿತು ಮಾಹಿತಿ ನೀಡಲಾಗುತ್ತಿದ್ದು, ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಬೇಕು.

ಮಗುವಿನ ಬೆಳವಣಿಗೆ ಹಂತಗಳ ಕುರಿತು ಸೂಕ್ಷ್ಮವಾಗಿ ಗಮನಿಸಬೇಕು. ಬೆಳವಣಿಗೆ ಕುಂಠಿತಗೊಂಡಲ್ಲಿ ಅದನ್ನು ಗುರುತಿಸುವ ಕೆಲಸವಾಗಬೇಕು ಎಂದು ಹೇಳಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ವಿಕಲತೆ, ನ್ಯೂನತೆಯನ್ನು ಪ್ರಾರಂಭಿಕ ಹಂತದಲ್ಲಿ ಹೇಗೆ ಗುರುತಿಸಬೇಕು, ಮಧ್ಯಸ್ಥಿಕೆಯನ್ನು ಹೇಗೆ ವಹಿಸಬೇಕು ಎಂಬುವುದರ ಕುರಿತು ತರಬೇತಿ, ಅರಿವು ಮೂಡಿಸುವ ಕಾರ್ಯಕ್ರಮದ ಅಂಗವಿಕಲತೆಯನ್ನು ಪ್ರಾರಂಭದಲ್ಲಿ ಹೇಗೆ ಗುರುತಿಸಬೇಕು ಎನ್ನುವುದರ ಸಂಬಂಧಪಟ್ಟ ಕಿಟ್ ವಿತರಣಾ ಕಾರ್ಯಕ್ರಮವನ್ನು ದಾವಣಗೆರೆಯ ದಿವ್ಯಾಂಗ ವ್ಯಕ್ತಿಗಳ ಕೌಶಲ್ಯಾಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣ ಸಂಯುಕ್ತ ಪ್ರಾದೇಶಿಕ ಕೇಂದ್ರದ ವತಿಯಿಂದ ಹಮ್ಮಿಕೊಳ್ಳಲಾಗಿದೆ. ಈ ಕೇಂದ್ರವು ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯದ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದು, ಈ ಕೇಂದ್ರದಲ್ಲಿ ವಿಕಲಚೇತನರಿಗೆ ಸಂಬಂಧಪಟ್ಟಂತೆ ಸಂಪೂರ್ಣ ಪುನರ್ವಸತಿ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭರಮಸಾಗರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎನ್.ಸುಧಾ, ಮಹಿಳಾ ಮತ್ತು ಅಭಿವೃದ್ಧಿ ಅಧಿಕಾರಿ ಪವಿತ್ರ, ಚಿತ್ರದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ವೀಣಾ, ಜಿಲ್ಲಾ ಪಂಚಾಯಿತಿ ಎಪಿಒ ಸುಮ, ದಾವಣಗೆರೆ ಸಿಆರ್‌ಸಿ ಪುನರ್ವಸತಿ ಅಧಿಕಾರಿ ವಿ.ಕನಗಸಭಾಪತಿ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಎಂ.ಆರ್. ಡಬ್ಲ್ಯೂ, ವಿ.ಆರ್.ಡಬ್ಲ್ಯೂ, ಯು.ಆರ್. ಡಬ್ಲ್ಯೂಗಳು ಇದ್ದರು.

## ಮಹಿಳಾ ದಿನಾಚರಣೆ ಪ್ರತಿದಿನ ಆಚರಿಸುವಂತಾಗಬೇಕು



**ತರೀಕೆರೆ:** ಕೇವಲ ಮಹಿಳಾ ದಿನಾಚರಣೆಯಂದು ಮಹಿಳಾ ದಿನಾಚರಣೆ ಆಚರಿಸದೆ ಪ್ರತಿ ದಿನವು ಆಚರಿಸುವಂತೆ ಆಗಬೇಕು ಎಂದು ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಊರ್ಮಿಳಾ ಹೇಳಿದರು.

ಅವರು ಉಚಿತ ಕಾನೂನು ನೆರವು ಮತ್ತು ವಕೀಲರ ಸಂಘದ ಆಶ್ರಯದಲ್ಲಿ ಮಹಿಳಾ ವಕೀಲರ ಸಭಾಭವನದಲ್ಲಿ ನಡೆದ ಅಂತರಾಷ್ಟ್ರೀಯ ಮಹಿಳಾ ದಿನಾಚರಣಾ ಸಮಾರಂಭದ ಉದ್ಘಾಟನೆಯನ್ನು ನೆರವೇರವೇರಿಸಿ ಮಾತನಾಡಿದರು.

\ಮಹಿಳೆಯರಿಗೆ ತಂದೆ ಮತ್ತು ಗಂಡನ ಮನೆ ಎಲ್ಲಾ ಕಡೆಗೂ ಹೊಂದಿಕೊಳ್ಳುವಂತೆ ಸೃಷ್ಟಿ ಮಾಡಿದ್ದಾರೆ. ಅದಕ್ಕೆ ತಕ್ಕಂತೆ ಸಮಾಜದಲ್ಲಿ ಪ್ರತಿಯೊಬ್ಬರು ನಮ್ಮನ್ನು ಗೌರವಿಸುವಂತೆ ನಾವು ನಡೆದುಕೊಳ್ಳಬೇಕೆಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ವೈದ್ಯಶ್ರೀಕಾಂತ್ ಮಾತನಾಡಿ, ಮಾರ್ಚ್ 10 ರಂದು ವಿಶ್ವ ಮಹಿಳಾ ನ್ಯಾಯಾಧೀಶೆಯರ ದಿನಾಚರಣೆಯನ್ನು ಸಹ ಆಚರಿಸುತ್ತಿದ್ದ ಈ ಸಂದರ್ಭದಲ್ಲಿ ಇಂದು ಮಹಿಳಾ ದಿನಾರಣೆಯನ್ನು ಆಚರಿಸುತ್ತಿರುವುದು ಅರ್ಥ ಗರ್ಭಿತವಾಗಿದೆ. ಸಮಾಜದಲ್ಲಿ ಹೆಣ್ಣು ಸರ್ವಶೇಷ್ಠವಾಗಿದ್ದು, ಎಲ್ಲಾ ಕಾಲಘಟ್ಟಗಳಲ್ಲೂ ವಿಶೇಷ ಸ್ಥಾನಮಾನ ನೀಡಿದೆ ಎಂದರು.

ವಕೀಲರ ಸಂಘದ ಮಾಜಿ ಅಧ್ಯಕ್ಷ ಎಸ್.ಸುರೇಶ್ಚಂದ್ರ ಮಾತನಾಡಿ, ಸಮಾಜದ ಎಲ್ಲಾ ರಂಗಗಳಲ್ಲೂ ಮಹಿಳೆ ಮುಂಚೂಣಿಯಲ್ಲಿದ್ದಾರೆ. ಆದರೆ ಲೋಕಸಭಾ ಮತ್ತು ವಿಧಾನ ಸಭೆಗಳಲ್ಲೂ ಅವಕಾಶ ನೀಡಬೇಕು. ಮಹಿಳೆಯರ ಮೇಲೆ ಆಗುತ್ತಿರುವ ನಿರಂತರ ಅತ್ಯಾಚಾರ, ದೌರ್ಜನ್ಯ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಎಗ್ಗಿಲ್ಲದೆ ಹರಿದಾಡುತ್ತಿರುವ ಮಹಿಳೆಯರ ಅಶ್ಲೀಲ ಚಿತ್ರಗಳ ವಿರುದ್ಧ ಹೋರಾಟ ಮಾಡಬೇಕೆಂದು ಹೇಳಿದರು.

ವಕೀಲ ಕೆ.ಎಲ್.ಲಿಂಗರಾಜು ಮಾತನಾಡಿ, ಮಹಿಳೆಯರಿಗೆ ಮಾರ್ಚ್ 8 ರಂದು ನೀಡಿದ ಮತದಾನದ ಹಕ್ಕಿನ ಸವಿನೆನಪಿಗಾಗಿ 1975ರಲ್ಲಿ ವಿಶ್ವಸಂಸ್ಥೆ ವಿಶ್ವ ಮಹಿಳಾ ದಿನಾಚರಣೆಯನ್ನು ಆಚರಿಸಲು ಪ್ರಾರಂಭಿಸಿತು ಎಂದರು.

## ಬಿಸಿಲಿನ ತಾಪ ಹೆಚ್ಚಳ ಮುಂಜಾಗೃತ ಕ್ರಮಗಳ ಪಾಲಿಸಲು ; ಎಂ.ಪಿ.ದೊಡ್ಡಮನಿ

**ವಿಜಯನಗರ(ಹೊಸಪೇಟೆ) :** ಬಿಸಿಲು, ಬಿಸಿಗಾಳಿ ತಾಪಕ್ಕೆ ಕಾರ್ಮಿಕರು ಹೈರಾಣಾಗದಂತೆ ಮುಂಜಾಗೃತ ಕ್ರಮಗಳನ್ನು ಪಾಲಿಸುವ ಮೂಲಕ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಜಿಲ್ಲಾ ಅರೋಗ್ಯ ಶಿಕ್ಷಣಾಧಿಕಾರಿ.ಎಂ.ಪಿ.ದೊಡಮನಿ ಹೇಳಿದರು.

ಹೊಸಪೇಟೆ ತಾಲೂಕಿನ ವ್ಯಾಸನಕೆರೆಯಲ್ಲಿ ಹೂಳು ತೆಗೆಯುವ ನರೇಗಾ ಕೂಲಿಕಾರ್ಮಿಕರಿಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಏರ್ಪಡಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಗುರುವಾರ ಅವರು ಮಾತನಾಡಿದರು, ಬೇಸಿಗೆಯಲ್ಲಿ ನಿರ್ಜಲೀಕರಣವಾಗದಂತೆ ಪ್ರತಿ 20 ನಿಮಿಷಕ್ಕೊಮ್ಮೆ ಶುದ್ಧ ಕುಡಿಯುವ ನೀರನ್ನು ಕುಡಿಯಬೇಕು. ಓಆರ್‌ಎಸ್



ಬಳಸಿ ನೀರು ಅಥವಾ ಮಾತ್ರೆಗಳನ್ನು ಸೇವಿಸಿದರೆ ಒಳ್ಳೆಯದು. ತಲೆ ನೋವು, ಮೈಕೈ ನೋವು ಕಂಡು ಬಂದರೆ ನಿರ್ಲಕ್ಷಿಸದೇ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ವೈದ್ಯಾಧಿಕಾರಿಗಳ ಬಳಿ ಚಿಕಿತ್ಸೆ ಪಡೆಯಬೇಕು. ಆದಷ್ಟು ಕಾರ್ಮಿಕರು ಬೆ.11 ರಿಂದ ಸಂಜೆ.4 ರವರೆಗೆ ನೇರ ಸೂರ್ಯನ ಬಿಸಿಲಿನಲ್ಲಿ ಕೆಲಸ ನಿರ್ವಹಿಸದಂತೆ ಎಚ್ಚರ ವಹಿಸಬೇಕು. ಕೆಲಸ ಮಾಡುವ ಸ್ಥಳದಲ್ಲಿ ಕಾರ್ಮಿಕರು ಆಯಾಸಗೊಂಡರೆ ವಿಶ್ರಾಂತಿ ಪಡೆಯಲು ನೆರಳಿನ ವ್ಯವಸ್ಥೆ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮಾಡಿಕೊಳ್ಳಬೇಕು. ಕಾರ್ಮಿಕರು ಆದಷ್ಟು ಹತ್ತಿಯ ಮತ್ತು ಶ್ವೇತ ವರ್ಣದ ತುಂಬು ತೋಳಿನ ಅಂಗಿ, ಬಟ್ಟೆ ಮತ್ತು ಟೋಪಿಯನ್ನು ಧರಿಸುವುದು ಉತ್ತಮ. ಕಾರ್ಮಿಕರು ಆರೋಗ್ಯದ ಕಡೆಗೆ ಹೆಚ್ಚು ಕಾಳಜಿ ವಹಿಸಬೇಕು ಎಂದರು.

## 'ಮರಳಿ ಮನಸಾಗಿದೆ'

(1ನೇ ಪುಟದಿಂದ)

ಮೂರನೇ ಹಾಡನ್ನು ಉಡುಪಿಯಲ್ಲಿ ಬಿಡುಗಡೆಗೊಳಿಸುತ್ತೇವೆ ಎಂದು ತಿಳಿಸಿದರು.

ನಮ್ಮ ಸಿನಿಮಾ ಚಿತ್ರೀಕರಣ ಮುಹೂರ್ತದ ವೇಳೆ, ಚಿತ್ರೀಕರಣ ಸೇರಿದಂತೆ ಇಲ್ಲಿಯವರೆಗೂ ದಾವಣಗೆರೆಯ ಗಣ್ಯರನೇಕರು ನಮ್ಮೂರ ಹುಡುಗ ಎಂದು ಹೆಚ್ಚಿನ ಸಹಕಾರ ನೀಡಿದ್ದಾರೆ. ನಮ್ಮ ಸಿನಿಮಾ ಪ್ರೊಮೋಷನ್‌ಗಾಗಿ ಬಿಐಇಟಿ ಕಾಲೇಜಿನ ದವನ ಫೆಸ್ಟ್ ನಮ್ಮನ್ನು ಆಹ್ವಾನಿಸಿದ್ದು, ಜೈನ್ ಎಂಜಿನಿಯರಿಂಗ್ ಕಾಲೇಜಿಗೂ ನಮ್ಮ ಚಿತ್ರತಂಡ ಭೇಟಿ ನೀಡುತ್ತಿದೆ ಎಂದು ಹೇಳಿದರು.

ಚಿತ್ರದ ನಾಯಕ ನಟ ಅರ್ಜುನ್ ವೇದಾಂತ್ ಮಾತನಾಡಿ, ನಾನು ಸಿನಿಮಾರಂಗಕ್ಕೆ ಯಾವುದೇ ಹಿನ್ನಲೆ ಇಲ್ಲದೆ ಬಂದವನು. ಕನ್ನಡ, ತಮಿಳು, ತೆಲುಗು ಸೇರಿದಂತೆ 10 ಚಿತ್ರಗಳಲ್ಲಿ ನಟಿಸುತ್ತಿದ್ದೇನೆ. ಈ ಚಿತ್ರತಂಡ ನಂಬರ್ ಒನ್ ಆಗಿದ್ದು, ನಮಗೆ ದಾವಣಗೆರೆ ಜನರು ಬೆಂಬಲ ನೀಡುತ್ತಿದ್ದಾರೆ. ಚಿತ್ರದಲ್ಲಿ ನಾನು 4 ಲುಕ್ ಗಳಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಈ ಸಿನಿಮಾ ಎಲ್ಲಾ ಲವ್ ಸ್ಟೋರಿಗಳಂತಿಲ್ಲದೆ, ವಿಶೇಷತೆ ಮೆರೆದಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದ ಎಂ.ಜಿ. ಶಶಿಕಲಾ, ಸಹನಾ ರವಿ, ಹಿರಿಯ ಪತ್ರಕರ್ತ ಬಾ.ಮ. ಬಸವರಾಜಯ್ಯ, ಪಿಆರ್ ಒ ತೆಲಗಿ ಮಲ್ಲಿಕಾರ್ಜುನಪ್ಪ, ನಿರ್ಮಾಣ ಮೇಲ್ವಿಚಾರಕರಾದ ಎಸ್. ವಿಜಯ್ ಕುಮಾರ್ ಇನ್ನಿತರರು ಮಾತನಾಡಿ, ಶುಭ ಹಾರೈಸಿದರು.

## ನಮ್ಮೆಲ್ಲ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ

(1ನೇ ಪುಟದಿಂದ)

ಎಂತಹ ಪರಿಸ್ಥಿತಿಯನ್ನೂ ತಿಳಿ ಮಾಡುವಂತಹ ತತ್ವ ಬಸವಣ್ಣನವರ ತತ್ವ, ಸಂದೇಶ, ವಚನಗಳಲ್ಲಿವೆ. ಅವುಗಳನ್ನು ಆಚರಣೆ ಮಾಡಿದರೆ ನಮ್ಮ ಬದುಕು ಸ್ವರ್ಗ, ಪಾವನವಾಗುತ್ತದೆ ಎಂದು ಹೇಳಿದರು.

ಸ್ಥಳೀಯ ಬಡಾವಣೆಯ ಮುಖಂಡರಾದ ಗುರುಮೂರ್ತಿ, ಮಾಂತೇಶ, ರಾಮಚಂದ್ರಪ್ಪ, ವಿ.ಜಗದೀಶ, ಶಿವಬಸಮ್ಮ ಕಲಕೋಟಿ, ಆರ್.ಜೆ.ಉಮಾದೇವಿ, ಶಿವಣ್ಣ, ಬಾಬಣ್ಣ, ಬಕ್ಕಣ್ಣ, ದೂಡಾ ಸದಸ್ಯೆ ವಾಣಿ ಬಕ್ಕೇಶ್, ಹಾಸಬಾವಿ ಕರಿಬಸಪ್ಪ, ಬೆಳ್ಳೂಡಿ ಮಂಜುನಾಥ,

ಮಹಾಂತೇಶ, ಎನ್.ಬಕ್ಕೇಶ್, ಚನ್ನಬಸವ ಶೀಲವಂತ್, ಕಣಕುಪ್ಪಿ ಮುರುಗೇಶಪ್ಪ, ಲಂಬಿ ಮುರುಗೇಶ ಇತರರು ಇದ್ದರು.

## ಸಾಧನೆಗೆ ಶ್ರಮ ತಾಳ್ಮೆ ಶಕ್ತಿ ಬೇಕು

(1ನೇ ಪುಟದಿಂದ)

ಅದು ಸರಿಮಾಡಿಕೊಳ್ಳುವಂತ ಶಕ್ತಿಯನ್ನು ಹೊಂದಿದೆ. ಕೋವಿಡ್ ಸಂದರ್ಭದಲ್ಲಿ ಲಸಿಕೆಯನ್ನು ಕೊಡುವಂತಹ ಕೆಲಸವನ್ನು ನಮ್ಮ ಭಾರತ ದೇಶ ಮಾಡಲು ಮುಂದಾಯಿತು.

ಸರ್ಕಾರದ ಜೊತೆಗೆ ಸಂಘ ಸಂಸ್ಥೆಗಳು ಇರುವುದರಿಂದ ನಮ್ಮ ಭಾರತ ಮುಂದುವರೆಯಲು ಸಾಧ್ಯವಾಗಿದೆ ಎಂದರು.

ಪ್ರತಿಷ್ಠಾನದ ಸಂಸ್ಥಾಪಕ ಸಾಲಿಗ್ರಾಮ ಗಣೇಶ ಶೆಣೈ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಅಧ್ಯಕ್ಷ ಡಾ. ನಾಗೇಶ ಸಂಜೀವ ಕಿಣಿ, ಮುಂಡಗೋಡದ ಕನ್ನಡ ಉಪನ್ಯಾಸಕಿ ಡಾ. ನಾಗರತ್ನ ಎಸ್.ಶೆಟ್ಟಿ, ಶೈಕ್ಷಣಿಕ ಸಾಧಕಿ ಸಂಗೀತಾ ಪ್ರಸನ್ನ ನಾಡಿಗ್, ವಿದುಷಿ ಆಶಾ ಅಡಿಗ ಆಚಾರ್ಯ(ಅಮೇರಿಕ), ಗೌರವಾಧ್ಯಕ್ಷೆ ಜ್ಯೋತಿ ಗಣೇಶ ಶೆಣೈ, ಕಲಾಕುಂಚ ಅಧ್ಯಕ್ಷ ಕೆ.ಎಚ್.ಮಂಜುನಾಥ, ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ, ಪ್ರಧಾನ ಕಾರ್ಯದರ್ಶಿ ಶ್ರೀಪತಿ ರಾಘವೇಂದ್ರ ಶೆಣೈ, ಹಾಗೂ ಪದಾಧಿಕಾರಿಗಳು ಇದ್ದರು.

ಚಂದ್ರಶೇಖರ್ ಅಡಿಗ ಪ್ರಾರ್ಥಿಸಿದರೆ, ಪುಷ್ಪ ಮಂಜುನಾಥ ಸ್ವಾಗತಿಸಿದರು. ಶೈಲಾ ವಿನೋದ ದೇವರಾಜ ಕಾರ್ಯಕ್ರಮ ನಿರೂಪಿಸಿದರೆ, ಡಿ.ಎಚ್.ಚನ್ನಬಸಪ್ಪ ವಂದಿಸಿದರು. ಈ ಸಂದರ್ಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳ ವಿವಿಧ ಕ್ಷೇತ್ರಗಳ 190 ಸಾಧಕರನ್ನು ಗುರುತಿಸಿ ಸನ್ಮಾನಿಸಲಾಯಿತು.

ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

## ಅಪೌಷ್ಠಿಕತೆಯಿಂದ ಶಿಶು ಮರಣ, ತಾಯಿ ಮರಣ ಆಗಬಾರದು



**ಚಿತ್ರದುರ್ಗ:** ಅಪೌಷ್ಟಿಕತೆಯ ಕಾರಣದಿಂದ ಶಿಶು ಮರಣ, ತಾಯಿ ಮರಣ ಆಗಬಾರದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಅಂಗನವಾಡಿ ಕೇಂದ್ರದಲ್ಲಿ ಶನಿವಾರ ಆರೋಗ್ಯ ಇಲಾಖೆ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಗ್ರಾಮ ಆರೋಗ್ಯ ಪೌಷ್ಠಿಕ ದಿನದಲ್ಲಿ ಅವರು ಮಾತನಾಡಿದರು.

ಗರ್ಭಿಣಿ ಆರೈಕೆ, ಬಾಣಂತಿ ಆರೈಕೆ, ಮಕ್ಕಳ ಆರೈಕೆ, ತಾಯಿ ಮಕ್ಕಳ ಆರೋಗ್ಯ ಸೇವೆಯಲ್ಲಿ ಪ್ರಮುಖ ಜವಾಬ್ದಾರಿಗಳಾಗಿವೆ. 12 ವಾರಗಳ ಒಳಗಡೆ ಗರ್ಭಿಣಿಯರನ್ನು ನೋಂದಾಯಿಸಿ, ತಾಯಿ ಕಾರ್ಡ್ ವಿತರಣೆ ಮಾಡಿ. ಪ್ರಾಥಮಿಕ ಹಂತದ ತಪಾಸಣೆ ನಡೆಸಿ ರಕ್ತದ ಒತ್ತಡ ಪರೀಕ್ಷೆ, ಹಿಮೋಗ್ಲೋಬಿನ್ ಪರೀಕ್ಷೆ ದಾಖಲಾತಿ ತೆಗೆದುಕೊಳಿ. ಪ್ರತಿ ತಿಂಗಳು ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನದಲ್ಲಿ ಪಾಲ್ಗೊಳ್ಳುವಂತೆ ಮನವರಿಕೆ ಮಾಡಿ ಪೌಷ್ಟಿಕ ಆಹಾರ ಸೇವನೆಯ ಬಗ್ಗೆ ತಿಳಿಸಿ ಸುರಕ್ಷಿತ ತಾಯ್ತನ ಪಡೆಯುವಂತೆ ಮಾಡಿ ಎಂದು ಹೇಳಿದರು.

ಮನೆ ಆಧಾರಿತ ನವಜಾತ ಶಿಶು ಭೇಟಿ ಕಾರ್ಯಕ್ರಮಗಳ ಬಲವರ್ಧನೆಗೊಳಿಸಿ, ಎದೆ ಹಾಲು ಉಣಿಸುವಿಕೆ, ಮಕ್ಕಳಿಗೆ ನೀಡುವ ಪೂರಕ ಪೌಷ್ಠಿಕ ಆಹಾರದ ಮಾಹಿತಿಯನ್ನು ಗ್ರಾಮ ಆರೋಗ್ಯ ಪೋಷಕ ದಿನದಂದು ಎಲ್ಲಾ ತಾಯಂದಿರಿಗೂ ತಿಳಿಸಿಕೊಡಿ ಎಂದು ಸಲಹೆ ನೀಡಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ವಾರದಲ್ಲಿ ಎರಡು ದಿನ ಪ್ರತಿ ಮಂಗಳವಾರ ಮತ್ತು ಶುಕ್ರವಾರ ಗೃಹ ಆರೋಗ್ಯ ಸೇವೆ ಒದಗಿಸಲು ಸಮುದಾಯ ಆರೋಗ್ಯ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು, ಆಶಾ ಕಾರ್ಯಕರ್ತೆಯರು, ಆರೋಗ್ಯ ನಿರೀಕ್ಷಣಾಧಿಕಾರಿಗಳು ನಿಮ್ಮ ಮನೆಗಳಿಗೆ ಭೇಟಿ ನೀಡುತ್ತಾರೆ. ಸಾಂಕ್ರಾಮಿಕವಲ್ಲದ ರೋಗಗಳಾದ ರಕ್ತದ ಒತ್ತಡ, ಮಧುಮೇಹ, ಬಾಯಿ ಕ್ಯಾನ್ಸರ್, ಸ್ತನ ಕ್ಯಾನ್ಸರ್ ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆಯ ಮಾರ್ಗದರ್ಶನ ಉಚಿತವಾಗಿ ನೀಡುತ್ತಾರೆ. ಈ ಸಂದರ್ಭದಲ್ಲಿ 30 ವರ್ಷದ ಮೇಲ್ಪಟ್ಟ ಎಲ್ಲಾ ನಾಗರಿಕರು ತಪಾಸಣೆ ಮಾಡಿಸಿಕೊಳ್ಳಿ. ಮಧುಮೇಹ, ರಕ್ತದ ಒತ್ತಡ ರೋಗಗಳಿಂದ ಮುಕ್ತಿ ಪಡೆಯಿರಿ, ಅಲ್ಲದೆ ಮಕ್ಕಳಿಗೆ ಕಾಲಕಾಲಕ್ಕೆ 12 ಮಾರಕ ರೋಗಗಳ ವಿರುದ್ಧ ಲಸಿಕೆ ಕೊಡಿಸಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳಾದ ಮಾಂತಾ ರಾಥೋಡ್ ನವ್ಯಶ್ರೀ, ನಾಗಮಣಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ವೀಣಾ, ಹಿರಿಯ ಆರೋಗ್ಯ ನಿರಕ್ಷಣಾಧಿಕಾರಿ ತಿಮ್ಮಣ್ಣ ನಾಯಕ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆ ಮಂಜುಳಾ, ಹಿರಿಯ ನಾಗರಿಕರ, ತಾಯಂದಿರು, ಗರ್ಭಿಣಿಯರು ಇದ್ದರು.

## ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಗುಣಮಟ್ಟದ ಶಿಕ್ಷಣ ತುಂಬಾ ಅವಶ್ಯ



**ಮೊಳಕಾಲ್ಮೂರು:** ಸಮಾಜದಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಸರ್ವತೋಮುಖ ಅಭಿವೃದ್ಧಿ ಹೊಂದಲು ಗುಣಮಟ್ಟದ ಶಿಕ್ಷಣ ಅತ್ಯಾವಶ್ಯವಾಗಿದೆ ಎಂದು ಶಾಲಾ ಮುಖ್ಯ ಶಿಕ್ಷಕ ಕೆ.ಎಸ್.ಹನುಮಂತಪ್ಪ ತಿಳಿಸಿದ್ದಾರೆ.

ತಾಲೂಕಿನ ಗುಂಡ್ಲೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾರದಾ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಾಲಾ ಮಕ್ಕಳಿಗೆ ವಿದ್ಯೆಯೇ ಭೂಷಣವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಶಾಲಾ ತರಗತಿಗಳಲ್ಲಿ ನೀಡುವ ಪಾಠಗಳನ್ನು ಗ್ರಹಿಸುವ ಮೂಲಕ ವಿದ್ಯಾಭ್ಯಾಸವನ್ನು ಪಡೆದು ಉನ್ನತ ವ್ಯಾಸಂಗದಲ್ಲಿ ಯಶಸ್ಸು ಪಡೆಯಲು ಸಾಧ್ಯ. ಮುಂದಿನ ಸ್ಪರ್ಧಾತ್ಮಕ ಕಾಲಘಟ್ಟದಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಲು ಶ್ರಮಿಸಿದ್ದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಹಕಾರಿಯಾಗಲಿದೆ. ಪ್ರತಿಯೊಬ್ಬ ವಿದ್ಯಾರ್ಥಿಯು ಪ್ರಾಥಮಿಕ ಹಂತದಲ್ಲಿಯೇ ಶಾಲಾ ತರಗತಿಗಳಲ್ಲಿ ಶಿಕ್ಷಕರು ನೀಡುವ ಕಲಿಕೆಯನ್ನು ಏಕಾಗ್ರತೆಯಿಂದ ಆಲಿಸಿ ವಿದ್ಯಾಭ್ಯಾಸವನ್ನು ಪಡೆದಲ್ಲಿ ಅಗ್ರಶ್ರೇಯಾಂಕದಲ್ಲಿ ಉತ್ತೀರ್ಣರಾಗಿ ಉನ್ನತ ಹುದ್ದೆಗಳನ್ನು ಗಳಿಸಿ ಉತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬಹುದಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಗಳು ಶಿಕ್ಷಣ ಪಡೆಯುವ ಜೊತೆಗೆ ತಂದೆ, ತಾಯಿ, ಗುರು, ಹಿರಿಯರಿಗೆ ಗೌರವ ನೀಡುವ ಸಂಸ್ಕಾರವನ್ನು ರೂಡಿಸಿಕೊಂಡು ಉಜ್ವಲ ಭವಿಷ್ಯರೂಪಿಸಿಕೊಳ್ಳಬಹುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಶಾರದಾ ಮಾತೆಯ ಭಾವಚಿತ್ರಕ್ಕೆ ಭಕ್ತಿ ಭಾವದೊಂದಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಕಾರ್ಯಕ್ರಮದಲ್ಲಿ ಬಿ.ಆರ್.ಪಿ.ಗಳಾದ ಸಿದ್ದಪ್ಪ, ಮಂಜುನಾಥ, ಸಿ.ಆರ್.ಪಿ. ಆದಿಬಸಪ್ಪ, ಈ ಶಾಲೆಯ ಸಹ ಶಿಕ್ಷಕ ಎನ್.ತಿಪ್ಪೇಸ್ವಾಮಿ ಹಾಗೂ ಶಾಲಾ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ತಂದೆ-ತಾಯಿಯವರ ಪಾದಪೂಜೆ ಮಾಡಿದರೆ ಸಾಕು ಪುಣ್ಯ ಪ್ರಾಪ್ತಿ

**ರಿಪ್ಪನ್‌ಪೇಟೆ:** ಭಗವಂತನಲ್ಲಿ ಭಕ್ತಿಯಿಂದ ಪ್ರಾರ್ಥಿಸುವುದರೊಂದಿಗೆ ತಾಯಿ ತಂದೆಯವರು ಸಂಸ್ಕಾರ ಭರಿತರಾದರೆ ಮಕ್ಕಳು ಸಹ ಸಂಸ್ಕಾರ ಭರಿತರಾಗಲು ಸಾಧ್ಯ.ವೆಂದ ಮೂಲೆಗದ್ದೆ ಸದಾನಂದ ಶಿವಯೋಗಾಶ್ರಮದ ಮ.ನಿ.ಪ್ರ.ಅಭಿನವ ಚನ್ನಬಸವ ಮಹಾಸ್ವಾಮಿಜಿ ಹೇಳಿದರು. ರಿಪ್ಪನ್‌ಪೇಟೆ ಸಮೀಪದ ಕಾರಗೋಡು ಗ್ರಾಮದ ಶ್ರೀ ಕಲಾನಾಥೇಶ್ವರ ದೇವಸ್ಥಾನದ ಪ್ರಥಮ ವರ್ಷದ ಪ್ರತಿಷ್ಠಾ ವರ್ಧಂತೋತ್ಸವ ಧಾರ್ಮಿಕ ಸಮಾರಂಭದ ದಿವ್ಯಸಾನಿಧ್ಯವಹಿಸಿ ಆಶೀರ್ವಚನ ನೀಡಿ ಇತ್ತೀಚೆಗೆ ಭಾರತದೇಶದಲ್ಲಿ ದೊಡ್ಡ ಕ್ರಾಂತಿಯಂತಾದ ಮಹಾನ್ ಕುಂಭ ಮೇಳದಲ್ಲಿ ಭಾಗವಹಿಸಿ ಗಂಗಾ ಯಮುನಾ ಸರಸ್ವತಿ ಸ್ನಾನ ಮಾಡುವುದರೊಂದಿಗೆ ಋಷಿ ಮುನಿಗಳ ಶಕ್ತಿಯುತ ಪುರುಷರಾಗಿದ್ದಾರೆ ಅವರ ದರ್ಶನ ಪಡೆದು ಪುಣ್ಯವಂತರಾಗುತ್ತಾರೆಂಬ ನಂಬಿಕೆಯಿದ್ದು ಹಲವರು ಈ ಪುಣ್ಯ ಕಾರ್ಯಕ್ಕೆ ಬಾಗವಹಿಸಲಾಗಿಲ್ಲ ಎಂದು ಬೇಸರ ಪಡುವ ಅಗತ್ಯವಿಲ್ಲ. ತಂದೆ.ತಾಯಿಯರ ಪಾದ ಪೂಜೆ ಮಾಡಿ ಪಾದ ತೊಳೆದ ಪಾದೋದಕವನ್ನು ಸ್ವೀಕರಿಸಿದರೆ ಸಾಕು ಹತ್ತು ಪಟ್ಟು ಪುಣ್ಯ ಲಭಿಸುವುದೆಂದು ಹೇಳಿದ ಶ್ರೀಗಳು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಿ ಶಿಕ್ಷಣವನ್ನು ಕೊಡಿಸಿ ಸುಸಂಸ್ಕೃತ ಸಮಾಜವನ್ನಾಗಿಸುವ ಕಾರ್ಯವನ್ನು ತಂದೆ ತಾಯಂದಿರು ಮಾಡಬೇಕಾಗಿದೆ ಎಂದರು. ಧಾರ್ಮಿಕ ಕೇಂದ್ರಗಳಿಂದ ಶಾಂತಿ ನೆಮ್ಮದಿ ಪಡೆಯಲು ಸಾಧ್ಯವೆಂದ



ಶ್ರೀಗಳು ಜಾತಿ ಬೇದ ಭಾವನೆ ಬೆಳಸದೆ ಚಾಡಿಮಾತಿನಿಂದ ಮನೆ ಒಡೆಯುವುದು ಯಾರಿಗೂ ಶೋಭೆ ತರುವುದಿಲ್ಲ.ದೇವಸ್ಥಾನ ಮಠ ಮಂದಿರಗಳಿಗೆ ಹೋಗಿ ಭಕ್ತಿಯಿಂದ ಭಗವಂತನ ನೆನೆದರೆ ಸಾಕು ಬದುಕಿನಲ್ಲಿ ಶಾಂತಿ ನೆಮ್ಮದಿಯಿಂದಿರಲು ಸಾಧ್ಯವೆಂದರು. ಧಾರ್ಮಿಕ ಸಭೆಯಲ್ಲಿ ಕಲಾನಾಥೇಶ್ವರ ಸ್ವಾಮಿ ದೇವಸ್ಥಾನ ಸೇವಾ ಸಮಿತಿಯ ಅಧ್ಯಕ್ಷ ನಾಗಭೂಷಣ,ಕಾರ್ಯದರ್ಶಿ ಮಂಜುನಾಥ, ಚೇತನಕುಮಾರ್,ಹಾಗೂ ಕಲಾನಾಥೇಶ್ವರ ಮಹಿಳಾ ಭಜನಾ ತಂಡದವರು ಹಾಗೂ ಕಾರಗೋಡು ಬೆಳಕೋಡು ಕರಡಿಗಾ ಕಣಬಂದೂರು ಮೂಗುಡ್ತಿ ವರನಹೊಂಡ ಸುತ್ತುಮುತ್ತಲಿನ ಭಕ್ತ ಸಮೂಹ ಪಾಲ್ಗೊಂಡಿದ್ದರು.

## ಸೋನಿಯಾ, ರಾಹುಲ್‌ಗಾಗಿ ಪ್ರಾಣ ಕೊಡಲೂ ಸಿದ್ಧ :ರಮಾನಾಥ ರೈ

**ಮಂಗಳೂರು:** ಕೇಂದ್ರ ಸರ್ಕಾರ ಜಾರಿ ನಿರ್ದೇಶನಾಲಯವನ್ನು (ಇ.ಡಿ) ಮುಂದಿಟ್ಟು ರಾಜಕೀಯ ನಡೆಸುತ್ತಿದೆ. ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರ ಮೇಲೆ ಸುಳ್ಳು ದೋಷಾರೋಪ ಪಟ್ಟಿ ಸಲ್ಲಿಸಿರುವುದು ಸಂಪೂರ್ಣ ರಾಜಕೀಯ ಪ್ರೇರಿತ. ಇದರ ವಿರುದ್ಧ ಬೀದಿಗಿಳಿದು ಹೋರಾಡುತ್ತೇವೆ. ಅಗತ್ಯ ಬಿದ್ದರೆ ಪ್ರಾಣ ಕೊಡಲೂ ಸಿದ್ಧ' ಎಂದು ಕೆಪಿಸಿಸಿ ಉಪಾಧ್ಯಕ್ಷ ರಮಾನಾಥ ರೈ ಹೇಳಿದರು.

ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಮತ್ತಿತರ ನಾಯಕರ ವಿರುದ್ಧ ಇ.ಡಿ ಸುಳ್ಳು ಆರೋಪ ಹೊರಿಸಿ ದೋಷಾರೋಪ ಪಟ್ಟಿ ಸಲ್ಲಿಸಿದೆ ಎಂದು ಆರೋಪಿಸಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ನಗರದಲ್ಲಿರುವ ಜಾರಿ ನಿರ್ದೇಶನಾಲಯದ ಕಚೇರಿ ಎದುರು ಬುಧವಾರ ನಡೆಸಿದ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

'ಬಿಜೆಪಿ ನೇತೃತ್ವದ ಕೇಂದ್ರದ ಸರ್ಕಾರ ಜಾರಿ ನಿರ್ದೇಶನಾಲಯದ ಮೂಲಕ ದಬ್ಬಾಳಿಕೆ ನಡೆಸುತ್ತಿದೆ. ದೇಶವ್ಯಾಪಿ ಪ್ರತಿಭಟನೆ ನಡೆಸುವ ಮೂಲಕ ಅದ-ಕ್ಕೆ ತಕ್ಕ ಉತ್ತರ ಕೊಟ್ಟಿದ್ದೇವೆ. ಈ ಹಿಂದೆಯೂ ಇ.ಡಿ ಮೂಲಕ ದಾಳಿ ಮಾಡಿಸಿ ಬಿಜೆಪಿಯೇತರ ನಾಯಕರನ್ನು ಹೆದರಿಸುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಿತ್ತು.

## ಗ್ರಾಮದ ಕಸ ಸಂಗ್ರಹಣಾ ವಾಹನಕ್ಕೆ ಮಂಜುಳಾ ಡ್ರೈವರ್ : ಇಓ ಚಂದ್ರಶೇಖರ್ ಕಂದಕೂರ ಶ್ಲಾಘನೆ

**ರೋಣ :** ಸಾರಿಗೆ ವಾಹನಗಳನ್ನು ಪುರುಷರಷ್ಟೆ ಚಲಾಯಿಸುವ ಸಂಪ್ರದಾಯ ಕರಗುತ್ತಾ ಬಂದಿದೆ. ಇತ್ತೀಚಿಗೆ ಅಲ್ಲಲ್ಲಿ ಕೆಲವೇ ಕೆಲವು ಮಹಿಳೆಯರು ಬಸ್, ಲಾರಿ ಮೊದಲಾದ ಭಾರಿ ವಾಹನಗಳನ್ನು ವೃತ್ತಿ ಪರವಾಗಿ ಚಾಲನೆ ಮಾಡುವುದು ಕಂಡುಬರುತ್ತಿದೆ. ಹಾಗೆಯೇ ಗದಗ ಜಿಲ್ಲೆ ರೋಣ ತಾಲೂಕಿನ ಜಕ್ಕಲಿ ಗ್ರಾಮದ ಮಹಿಳೆ ಮಂಜುಳಾ ಸ್ವಚ್ಚ ವಾಹಿನಿ ಚಾಲಕಿಯಾಗಿ ಕೆಲಸ ಮಾಡುತ್ತಾ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಗಿದ್ದಾಳೆ..

ಹೌದು ಜಕ್ಕಲಿ ಗ್ರಾಮ ಪಂಚಾಯತಿ ಯಲ್ಲಿ ಸ್ವ ಸಹಾಯ ಸಂಘದ ಮೂಲಕ ಚಾಲನಾ ತರಬೇತಿ ಪಡೆದು ಮಂಜುಳಾ ಯಲ್ಲಪ್ಪ ಮಾದರ ಸ್ವಚ್ಚ ವಾಹಿನಿ ಚಾಲಕಿಯಾಗಿ ಕಳೆದ 6 ತಿಂಗಳಿಂದ ಕೆಲಸ ಮಾಡುತ್ತಿದ್ದಾಳೆ,



ಮಲ್ಲವ್ವ ಭರಮಪ್ಪ ಮಾದರ, ಶಿವವ್ವ ಈರಪ್ಪ ಮಾದರ, ರೇಣುಕಾ ಪ್ರಶಾಂತ ಮಾದರ ಇವರು ಕಸ ವಿಂಗಡನೆ ಕಾರ್ಯ ನಿರ್ವಹಿಸುತ್ತಿದ್ದಾರೆ ಈ ಮೂಲಕ ಮಹಿಳೆಯರೆ ಸ್ವಚ್ಚ ವಾಹಿನಿಯನ್ನು ನಡೆಸಿಕೊಂಡು ಹೋಗುತ್ತಿದ್ದಾರೆ..

ಗ್ರಾಮ ಪಂಚಾಯತಿ ವತಿಯಿಂದ ಮನೆ ಮನೆಗೆ ತೆರಳಿ ಒಣ ಕಸವಾದ ಪ್ಲಾಸ್ಟಿಕ್ ಬಾಟಲಿ, ಗಾಜಿನ ಬಾಟಲಿ, ಪ್ಲಾಸ್ಟಿಕ್ ಚೀಲ, ಬಳಸಿ ಬಿಸಾಡುವ ವಸ್ತುಗಳನ್ನು ಸಂಗ್ರಹಿಸಿ, ಅವುಗಳನ್ನು ಕಸ ವಿಲೇವಾರಿ ಘಟಕದಲ್ಲಿ ವಿಂಗಡಿಸಿ, ವರ್ಷಾಂತ್ಯದಲ್ಲಿ ಅವುಗಳನ್ನು ಹರಾಜು ಹಾಕುವ ಮೂಲಕ ಆದಾಯ ಗಳಿಸುವ ಯೋಚನೆಯಲ್ಲಿ ಸ್ವ ಸಹಾಯ ಸಂಘದ ಮಹಿಳೆಯರು ತೊಡಗಿದ್ದಾರೆ. ಅಲ್ಲದೆ ಪ್ರತಿ ಮನೆಗೆ ತಿಂಗಳಿಗೆ ರೂ. 30 ಮತ್ತು ಅಂಗಡಿಗಳಿಗೆ ರೂ.100 ಗಳನ್ನು ಸಂಗ್ರಹಿಸಿ ಅದರಲ್ಲೇ ತಮ್ಮ ವೇತನ ಪಾವತಿ ಮಾಡಿಕೊಂಡು, ಉಳಿದ ಹಣವನ್ನು ಉಳಿತಾಯ ಮಾಡಲು ಯೋಜನೆ ರೂಪಿಸಲಾಗಿದೆ.

## ಬಿಐಇಟಿಯಲ್ಲಿ ನಮ್ಮ ದವನ ಸಮಾರೋಪ ಸಮಾರಂಭ

**ದಾವಣಗೆರೆ:** ಇಲ್ಲಿನ ಬಿಐಇಟಿಯಲ್ಲಿ ಹಮ್ಮಿಕೊಂಡಿದ್ದ ನಮ್ಮ ದವನ–2025 ಸಮಾರಂಭವು ಸಂಗೀತ, ನೃತ್ಯ, ನಾಟಕ, ಚರ್ಚಾ ಸ್ಪರ್ಧೆ, ಸಾಹಿತ್ಯ ಮತ್ತು ಕಲೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ ನಡೆಸುವ ಮೂಲಕ ಸಮಾರೋಪಗೊಂಡಿತು.

ಪತ್ರಕರ್ತೆ ಪ್ರೀತಿ ನಾಗರಾಜ್ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿ, ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ತಮ್ಮಲ್ಲಿ ಅಡಗಿರುವ ಪ್ರತಿಭೆ ಹೊರಹಾಕಲು ಒಂದು ಉತ್ತಮ ವೇದಿಕೆಯಾಗಿದೆ ಎಂದು ತಿಳಿಸಿದರು.

18 ವಿಭಾಗಗಳಲ್ಲಿ ವಿವಿಧ ಸ್ಪರ್ಧೆಗಳು ನಡೆದವು. ಕಾಲೇಜಿನ 15 ವಿಭಾಗದ ಸುಮಾರು 525 ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ದವನ ಚಾಂಪಿಯನ್ ಪ್ರಶಸ್ತಿಯನ್ನು ಡೇಟಾಸೈನ್ಸ್ ವಿಭಾಗ ಗಳಿಸಿತು. ಪ್ರಥಮ ರನ್ನರ್ ಅಪ್ ನ್ನು ಕಂಪ್ಯೂಟರ್ ಸೈನ್ಸ್ ಅಂಡ್ ಎಂಜಿನಿಯರಿಂಗ್ ವಿಭಾಗ ಹಾಗೂ ದ್ವಿತೀಯ ರನ್ನರ್ ಅಪ್ ನ್ನು ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ ಗಳಿಸಿದವು.

ಕಾಲೇಜಿನ ಡೇಟಾ ಸೈನ್ಸ್ ವಿಭಾಗದ ಆರ್. ನಿತಿನ್ ಮತ್ತು ತನುಶ್ರೀ ಶಿವಾನಂದ್ ಈ ವರ್ಷದ ದವನ ಕುವರ ಮತ್ತು ದವನ ಕುವರಿ ಪ್ರಶಸ್ತಿಗೆ ಭಾಜನರಾದರು.

ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜಿನ ನಿರ್ದೇಶಕರಾದ ಪ್ರೊ. ವೈ ವೃಷಭೇಂದ್ರಪ್ಪ ವಹಿಸಿದ್ದರು. ಪ್ರಾಂಶುಪಾಲರಾದ ಡಾ.ಎಚ್ ಬಿ ಅರವಿಂದ್ ಸರ್, ಡಾ.ಮಾನವೇಂದ್ರ, ಡಾ. ಕೆ ಸಿ ದೇವೇಂದ್ರಪ್ಪ, ಹಾಗೂ ವಿದ್ಯಾರ್ಥಿ ಪರಿಷತ್ತಿನ ಸಂಚಾಲಕರಾದ ಡಾ. ಎಸ್ ಎಂ ಚಂದ್ರಶೇಖರ್, ಪ್ರೊ. ಶ್ರೀನಿಧಿ ಆರ್ ಕುಲಕರ್ಣಿ, ಸಾವನ್ ಬಸವರಾಜ್, ಡಾ. ಶಿವಕುಮಾರ್ ಸ್ವಾಮಿ ಮತ್ತು ಭಾಗ್ಯಶ್ರೀ ಭಾಗವಹಿಸಿದ್ದರು. ಚಿನ್ಮಯಿ ಪ್ರಾರ್ಥಿಸಿದರು. ವಿದ್ಯಾರ್ಥಿನಿ ಡಿ.ಆರ್. ಸಹನಾ ವಂದಿಸಿದರು.

## ಶಿಕ್ಷಣ, ಉದ್ಯೋಗಗಳಲ್ಲಿ ಮೀಸಲಾತಿಗಾಗಿ ಒಂದು ಜಾತಿಯನ್ನು ವಿವಿಧ ಗುಂಪುಗಳಾಗಿ ವರ್ಗೀಕರಿಸೋದು ಸರಿಯಲ್ಲ: ಹೈಕೋರ್ಟ್ ಮಹತ್ವದ ತೀರ್ಪು

**ಬೆಂಗಳೂರು:** ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಒಂದೇ ಸಮುದಾಯವನ್ನು ಎರಡು ವಿಭಿನ್ನ ಮೀಸಲಾತಿ ವರ್ಗಗಳ ಅಡಿಯಲ್ಲಿ ವರ್ಗೀಕರಿಸುವುದು ಸರಿಯಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಬಲಜಿಗ/ಬಣಜಿಗ ಸಮುದಾಯದ ರಾಜ್ಯದ ವರ್ಗೀಕರಣವನ್ನು ಪ್ರಶ್ನಿಸಿ ಮೈಸೂರು ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ನಿವಾಸಿ ವಿ ಸುಮಿತ್ರಾ ಸಲ್ಲಿಸಿದ ಅರ್ಜಿಗೆ ಪ್ರತಿಕ್ರಿಯೆಯಾಗಿ ಈ ಹೈಕೋರ್ಟ್ ಈ ತೀರ್ಪು ನೀಡಿದೆ. ಇತ್ತೀಚೆಗೆ ತೀರ್ಪು ನೀಡಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್, ಶಿಕ್ಷಣ ಮತ್ತು ಉದ್ಯೋಗ ಉದ್ದೇಶಗಳಿಗಾಗಿ ಬಲಜಿಗ/ಬಣಜಿಗ ಸಮುದಾಯವನ್ನು ಗುಂಪು 'ಬಿ' ಅಡಿಯಲ್ಲಿ ಏಕರೂಪವಾಗಿ ವರ್ಗೀಕರಿಸಲು ಕರ್ನಾಟಕ ಸರ್ಕಾರಕ್ಕೆ ನಿರ್ದೇಶನ ನೀಡಿದರು.

ಶಿಕ್ಷಣಕ್ಕಾಗಿ ವರ್ಗ 'ಬಿ' ಅಡಿಯಲ್ಲಿ (ಆರ್ಟಿಕಲ್ 15(4) ಅಡಿಯಲ್ಲಿ) ಮತ್ತು ಉದ್ಯೋಗಕ್ಕಾಗಿ ವರ್ಗ 'ಡಿ' ಅಡಿಯಲ್ಲಿ (ಆರ್ಟಿಕಲ್ 16(4) ಅಡಿಯಲ್ಲಿ) ಸಮುದಾಯವನ್ನು ಇರಿಸುವ ರಾಜ್ಯದ ಅಸ್ತಿತ್ವದಲ್ಲಿರುವ ವರ್ಗೀಕರಣವು ತಾರತಮ್ಯ ಮತ್ತು ಸಂವಿಧಾನಬಾಹಿರವಾಗಿದೆ ಎಂಬುದನ್ನು ನ್ಯಾಯಾಲಯ ಗಮನಿಸಿದೆ. ಸುಮಿತ್ರಾ ಅವರು ತಮ್ಮ ಜಾತಿ 'ಬಿ' ವರ್ಗಕ್ಕೆ ಸೇರಿದೆ ಎಂದು ಹೇಳಿಕೊಂಡ ಕಾರಣ 1993ರಲ್ಲಿ ಒಬಿಸಿ ಕೋಟಾದಡಿಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ನೇಮಕಗೊಂಡರು. ಆದಾಗ್ಯೂ, 1996ರಲ್ಲಿ ಉದ್ಯೋಗಕ್ಕಾಗಿ ತಮ್ಮ ಸಮುದಾಯವನ್ನು 'ಡಿ' ವರ್ಗದ ಅಡಿಯಲ್ಲಿ ವರ್ಗೀಕರಿಸಲಾಗಿದೆ ಎಂದು ತಿಳಿಸುವ ನೋಟಿಸ್ ಅವರಿಗೆ ಬಂದಿತು. ಇದರಿಂದಾಗಿ ಅವರ ಜಾತಿ ಪ್ರಮಾಣಪತ್ರವು ಉದ್ಯೋಗ–ಸಂಬಂಧಿತ ಮೀಸಲಾತಿಗೆ ಅಮಾನ್ಯವಾಗಿತ್ತು.

ಇಲಾಖಾ ಮೇಲ್ಮನವಿಗಳು ಮತ್ತು ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಮೂಲಕ ಪರಿಹಾರಕ್ಕಾಗಿ ಹಲವು ಬಾರಿ ಯತ್ನಿಸಿದರೂ ಪ್ರಯೋಜನವಾಗಲಿಲ್ಲ. ನಂತರ ಸುಮಿತ್ರಾ ಈ ದ್ವಂದ್ವ ವರ್ಗೀಕರಣವನ್ನು ತೋರಿಸುವ 1986ರ ಸರ್ಕಾರಿ ಅಧಿಸೂಚನೆಯನ್ನು ಪತ್ತೆಹಚ್ಚಿದರು. ಆರ್ಟಿಕಲ್ 15(4) ಮತ್ತು 16(4) ವಿಧಿಗಳ ಹಿಂದಿನ ಸಾಂವಿಧಾನಿಕ ಉದ್ದೇಶವು ಸ್ಥಿರವಾಗಿದೆ. ಅದೇ ಅನಾನುಕೂಲಕರ ವರ್ಗಗಳಿಗೆ ಸಾಮಾಜಿಕ ನ್ಯಾಯವನ್ನು ಖಚಿತಪಡಿಸುವ ಗುರಿಯನ್ನು ಹೊಂದಿದೆ ಎಂದು ವಾದಿಸಿದ ಅವರು, ರಾಜ್ಯದ ವರ್ಗೀಕರಣವನ್ನು ಪ್ರಶ್ನಿಸಿದರು.

ನ್ಯಾಯಮೂರ್ತಿ ಗೋವಿಂದರಾಜ್ ಅವರು ಈ ವಾದವನ್ನು ಎತ್ತಿಹಿಡಿದು, 14ನೇ ವಿಧಿಯ ಅಡಿಯಲ್ಲಿ ಕಾನೂನಿನ ಮುಂದೆ ಸಮಾನತೆಯ ತತ್ವವು ಮೀಸಲಾತಿಯ ವಿಷಯದಲ್ಲೂ ಸಮಾನ ವ್ಯವಸ್ಥೆಯನ್ನು ಒಳಗೊಂಡಿದೆ. ಸಂದರ್ಭವನ್ನು ಅವಲಂಬಿಸಿ ಒಂದೇ ಸಮುದಾಯವನ್ನು ವಿಭಿನ್ನ ವರ್ಗಗಳಲ್ಲಿ ಇರಿಸಲಾಗುವುದಿಲ್ಲ ಅಂತಹ ವಿಭಾಗವು ಅಂತರ್ಗತವಾಗಿ ತಾರತಮ್ಯದಿಂದ ಕೂಡಿದೆ ಎಂದು ಕೋರ್ಟ್ ಅಭಿಪ್ರಾಯಪಟ್ಟಿದೆ. ಅಂತಹ ಯಾವುದೇ ವಿಭಿನ್ನ ನಡವಳಿಕೆ ಸಾಂವಿಧಾನಿಕ ರಕ್ಷಣೆಗಳನ್ನು ಉಲ್ಲಂಘಿಸುತ್ತದೆ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

"ಶಿಕ್ಷಣಕ್ಕಾಗಿ ಹಿಂದುಳಿದ ಸಮುದಾಯವನ್ನು ಗುರುತಿಸಿದರೆ, ಉದ್ಯೋಗಕ್ಕೆ ಬಂದಾಗ ಅದನ್ನು ವಿಭಿನ್ನವಾಗಿ ಪರಿಗಣಿಸಲಾಗುವುದಿಲ್ಲ ಎಂದು ನ್ಯಾಯಾಧೀಶರು ಹೇಳಿದರು. ಅಲ್ಲದೆ ಉದ್ಯೋಗದಲ್ಲಿ ಸುಮಿತ್ರಾ ಅವರ ಗ್ರೂಪ್ 'ಬಿ' ಮೀಸಲಾತಿ ಹಕ್ಕನ್ನು ತಿರಸ್ಕರಿಸಿದ ಆದೇಶಗಳನ್ನು ರದ್ದುಗೊಳಿಸಿ, ಮೀಸಲಾತಿ ವರ್ಗ 'ಬಿ' ಅಡಿಯಲ್ಲಿ ಅವರ ಅರ್ಹತೆಯನ್ನು ಒಪ್ಪಿಕೊಂಡು, ಪ್ರಾಥಮಿಕ ಶಾಲಾ ಶಿಕ್ಷಕಿಯಾಗಿ ಅವರ ಉದ್ಯೋಗವನ್ನು ಪುನರ್ ಕಲ್ಪಿಸಿ ಎಂದು ರಾಜ್ಯಕ್ಕೆ ನಿರ್ದೇಶನ ನೀಡಿದೆ.

## ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ :** 2024–25 ನೇ ಸಾಲಿನ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಮತ್ತು ನೀಲಿಕ್ರಾಂತಿ ಯೋಜನೆಯಡಿ ಕೇಂದ್ರ ಕಚೇರಿಯಿಂದ ಮರು ಹಂಚಿಕೆ ಮಾಡಿ ನೀಡಿರುವ ಗುರಿಗಳಿಗನುಸಾರವಾಗಿ ಬಾಕಿಯಿರುವ ಗುರಿಗಳಿಗೆ ಅರ್ಹ ಫಲಾನುಭವಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಮೇ 9 ರ ಸಂಜೆ 5.30 ಕೊನೆಯ ದಿನವಾಗಿರುತ್ತದೆ. ಎಂದು ಮೀನುಗಾರಿಕೆ ಉಪನಿರ್ದೇಶಕರು ಶಿವಮೊಗ್ಗ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




# ಸ್ಮಾರ್ಟ್ ಆಗದ ಮಲೆನಾಡು ಮಡಿಲು

ಶಿವಮೊಗ್ಗ: ನಗರದ ಸ್ಮಾರ್ಟ್ ಸಿಟಿಯೋಜನೆಯ ಗಡುವುಮಾರ್ಚ್ 31ಕ್ಕೆ ಮುಕ್ತಾಯಗೊಂಡಿದ್ದು, ಮಹಾನಗರ ಪಾಲಿಕೆಗೆ ಇದನ್ನು ಹಸ್ತಾಂತರಿಸುವ ಪ್ರಕ್ರಿಯೆ ನಡೆಯುತ್ತಿದೆ. ಇಷ್ಟಾದರೂ, ಕೈಗೆತ್ತಿಕೊಂಡಿರುವಯೋ ಜನೆಗಳು ಇನ್ನೂ ಪೂರ್ಣಗೊಂಡಿಲ್ಲ. ಇದಕ್ಕೆ ಇನ್ನಷ್ಟು ಸಮಯ ಬೇಕಿದೆ!

2016ರಲ್ಲಿ ಅಂದಾಜು 930 ಕೋಟಿ ಮೊತ್ತದಲ್ಲಿ 76ಯೋಜನೆಗಳಿಗೆ ಚಾಲನೆ ನೀಡಲಾಗಿತ್ತು. 'ಈ ಅವಧಿಯಲ್ಲಿ ಎಲ್ಲಾ ಯೋ ಜನೆಗಳೂ ಪೂರ್ಣಗೊಂಡಿವೆ. ಅವುಗಳ ಸಮರ್ಪಕ ನಿರ್ವಹಣೆಯನ್ನೂ ಮಾಡಲಾಗುತ್ತಿದೆ' ಎಂದು ಸ್ಮಾರ್ಟ್‌ಸಿಟಿ ಅಧಿಕಾರಿಗಳು ಹೇ ಳುತ್ತಿದ್ದಾರೆ. ವಾಸ್ತವದಲ್ಲಿ ಇನ್ನೂ ಮೂರ್ನಾಲ್ಕು ಯೋಜನೆಗಳ ಕಾಮಗಾರಿ ಅಂತಿಮ ಹಂತಕ್ಕೆ ತಲುಪಿಯೇ ಇಲ್ಲ.

'ಯೋಜಿತ ಕಾಮಗಾರಿಗಳೆಲ್ಲವೂ ಶೇ 98.60ರಷ್ಟು ಪ್ರಗತಿ ಸಾಧಿಸಿವೆ. 922.12 ಕೋಟಿ ವೆಚ್ಚದಲ್ಲಿ 75 ಕಾಮಗಾರಿಗಳು ಪೂರ್ಣಗೊಂಡಿವೆ. ಉಳಿದ ಒಂದು ಕಾಮಗಾರಿಯನ್ನು ಜೂನ್ ಅಂ ತ್ಯದಲ್ಲಿ ಮುಕ್ತಾಯಗೊಳಿಸಲಾಗುವುದು' ಎಂದು ಸ್ಮಾರ್ಟ್ ಸಿಟಿಯಿಂದ ಮಹಾನಗರ ಪಾಲಿಕೆಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಲಾಗಿದೆ. ಆದರೆ, ಇಲ್ಲಿನ ಗಾಂಧಿ ಪಾರ್ಕ್ ಆವರಣದಲ್ಲಿ 8.58 ಕೋಟಿ ವೆಚ್ಚದಲ್ಲಿ ನಿರ್ಮಿ ಸಲು ಉದ್ದೇ ಶಿಸಿದ್ದ ವನ್ಯಜೀವಿ ವ್ಯಾಖ್ಯಾನ ಕೇಂದ್ರ ಮತ್ತು ವಿಜ್ಞಾನ ಉದ್ಯಾನದ ಅಭಿವೃದ್ಧಿ ಕಾಮಗಾರಿ ಸ್ಥಗಿ–ತಗೊಂಡಿದೆ.

ಸ್ಮಾರ್ಟ್‌ಸಿಟಿಯೋ ಜನೆಯಡಿ ವಿದ್ಯುತ್ ಶಕ್ತಿ ಉತ್ಪಾದಿಸಲು ತುಂಗಾ ಎಡದಂಡೆ ಕಾಲುವೆಯ ಮೇಲ್ಭಾಗದಲ್ಲಿ ಕ್ಲೀನ್ ಆಂಡ್ ಗ್ರೀನ್ ಎನರ್ಜಿ ಉತ್ಪಾದನೆಯ ಗುರಿ ಹೊಂದಲಾಗಿತ್ತು. ಇದಕ್ಕೆ ಗುತ್ತಿಗೆದಾರರು ಮುಂದೆ ಬಾರದ ಕಾರಣಯೋಜನೆ ಅರ್ಧದಲ್ಲಿಯೇ ನಿಂತಿದೆ.

100 ಸ್ಮಾರ್ಟ್‌ಬಸ್ ನಿಲ್ದಾಣಗಳ ನಿರ್ಮಾಣ, ಮಲ್ಟಿ–ಲೆವೆಲ್ ಕಾರ್ ಪಾರ್ಕಿಂಗ್, ಹಾಕರ್ಸ್ ಝೋನ್, ಖಾಸಗಿ ಬಸ್ ನಿಲ್ದಾಣ ಅಭಿವೃದ್ಧಿ ಹೀಗೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಆದರೆ, ಸಮರ್ಪ ಕ ನಿರ್ವಹಣೆ ಕಾಣದೆ ಇವು ನನೆಗುದಿಗೆ ಬಿದ್ದಿವೆ.


ನಗರದ ರವೀಂದ್ರ ನಗರ, ಬಸವನಗುಡಿ, ಟ್ಯಾಂಕ್ ಮೊಹಲ್ಲ, ಶರಾವತಿ ನಗರ,ಹೊಸಮನೆ ಮತ್ತು ದುರ್ಗಿಗುಡಿ, ಮಲ್ಲೇಶ್ವರನಗರ, ಗಾಂಧಿನಗರ, ಅರಮನೆ ಪ್ರದೇಶ, ವಿದ್ಯಾನಗರ ಉತ್ತರ, ಗಾಂಧಿ ಬಜಾರ್, ಸೀ ಗೆಹಟ್ಟಿ, ಎನ್.ಟಿ ರಸ್ತೆ ತುಂಗಾನದಿ, ವಿದ್ಯಾನಗರದ 6 ಚದರ ಕಿ.ಮೀ ವ್ಯಾಪ್ತಿಯ



1,500 ಎಕರೆ ಪ್ರದೇಶದಲ್ಲಿ ಮೂಲಸೌಕರ್ಯ ಒದಗಿಸಲಾಗಿದೆ ಎನ್ನಲಾಗುತ್ತಿದೆ. ಆದರೆ, ಈ ವ್ಯಾಪ್ತಿಯಿಂದ ಈವರೆಗೆ 1000ಕ್ಕೂ ಹೆಚ್ಚು ದೂರುಗಳು ಸಲ್ಲಿಕೆಯಾಗಿವೆ. ಕಳಪೆ ಕಾಮಗಾರಿಯ ಆರೋ ಪಗಳೂ ಕೇಳಿ ಬಂದಿವೆ.

'ನಗರದಲ್ಲಿನ ಪಾರ್ಕಿಂಗ್ ಸಮಸ್ಯೆ ಪರಿಹರಿಸಲು ಸ್ಮಾರ್ಟ್‌ಸಿಟಿ ವತಿಯಿಂದ ಶಿವಪ್ಪ ನಾಯಕ ವೃತ್ತದಲ್ಲಿ ಬಹುಮಹಡಿ ಪಾರ್ಕಿಂ ಗ್ ಕಟ್ಟಡ ನಿರ್ಮಿಸಿ ಲೋಕಾರ್ಪಣೆ ಮಾಡಲಾಗಿದೆ. 25 ಕೋಟಿ ವೆಚ್ಚದಲ್ಲಿ ನಿರ್ಮಿ ಸಿರುವ 3 ಅಂತಸ್ತಿನ ಈ ಪಾರ್ಕಿಂ ಗ್ ಕಟ್ಟಡದ ನಿರ್ವಹಣೆಗೆಮೂರು ಬಾರಿ ಟೆಂಡರ್ ಪ್ರಕ್ರಿಯೆ ನಡೆದಿದೆ. ಆದರೆ, ಯಾರೂ ಗುತ್ತಿಗೆ ಪಡೆಯಲು ಮುಂದೆ ಬರುತ್ತಿಲ್ಲ' ಎಂದು ಮಹಾನಗರ ಪಾಲಿಕೆ ಆಯುಕ್ತೆ ಹಾಗೂ ಸ್ಮಾರ್ಟ್ ಸಿಟಿಯೋ ಜನೆಯ ವ್ಯವಸ್ಥಾಪಕ ನಿರ್ದೇಶಕರೂ ಆದ ಕವಿತಾ ಯೋಗಪ್ಪನವರ್ ತಿಳಿಸಿದರು.

ಶಿವಪ್ಪ ನಾಯಕ ಅರಮನೆಯನ್ನು ಮೇಲ್ದರ್ಜೆಗೇರಿಸುವ ಕಾಮಗಾರಿ ಪೂರ್ಣ ಗೊಳಿಸಲು 15.8 ಕೋಟಿ



ಮೀಸಲಿರಿಸಲಾಗಿತ್ತು. ಆದರೆ, ಕೆಲವೊಂದು





ಮಾರ್ಪಾಡುಗಳಿಂದ ಈ ಮೊತ್ತ ಹೆಚ್ಚಾಗಿತ್ತು. ಹೆಚ್ಚುವರಿ ಮೊತ್ತ ಬಿಡುಗಡೆಗೆ ಕರ್ನಾಟಕ ನಗರಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು (ಕೆಯುಐಡಿಎಫ್ಸಿ) ನಿಗಮ ಅನುಮತಿ ನೀಡಿದೆ. ಶೀಘ್ರದಲ್ಲಿ ಅಭಿವೃದ್ಧಿ ಕಾಮಗಾರಿ ಪೂರ್ಣ ಗೊಳ್ಳಲಿದೆ' ಎಂದು ಹೇಳಿದರು.

'ನೂರಾರು ಕೋಟಿ ವೆಚ್ಚದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಆದರೆ, ಇದರ ನಿರ್ವಹಣೆಯಾರಹೊಣೆ ಎಂಬುದು ಗೊತ್ತಿಲ್ಲ. ಕಾಮಗಾರಿ ನಡೆಸಿ ತಿಂಗಳೊಳಗೆ ಇವು ಹಾಳಾಗುತ್ತಿವೆ. ಇದರ ಬಗ್ಗೆ ಪ್ರಶ್ನಿಸಿದರೆ ಉತ್ತರವೇ ಸಿಗದಾಗಿದೆ. ಸ್ಮಾರ್ಟ್‌ಸಿಟಿ ಎನ್ನುವುದು ಭವಿಷ್ಯದ ಚಿಂತನೆ ಆಗಬೇಕು. ಈಯೋಜನೆಗಳ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು' ಎಂದು ಸ್ಥಳೀಯ ನಿವಾಸಿ ಎಂ.ಹಾಲೇಶಪ್ಪ ಬೇ'ರ ವ್ಯಕ್ತಪಡಿಸಿದರು.

ಸ್ಮಾರ್ಟ್ ರಸ್ತೆಗೆ 470 ಕೋಟಿ ವೆಚ್ಚಜಲಮಂಡಳಿಯಿಂದ ಅಗೆತ

ಸ್ಮಾರ್ಟ್‌ಸಿಟಿಯೋಜನೆಯಡಿ 470.46 ಕೋಟಿ ವೆಚ್ಚದಲ್ಲಿ 110 ಕಿ.ಮೀ ಉದ್ದದ 8 ಸ್ಮಾರ್ಟ್ ರಸ್ತೆಗಳಲ್ಲಿ ಅಂಡರ್ ಗ್ರೌಂಡ್ ಮಾರ್ಗ ಎಚ್ಟಿ ಎಲ್ಟಿ ವಿದ್ಯುತ್ ಸಂಪರ್ಕ ಕುಡಿವ ನೀ ರು ಸರಬರಾಜು ಪೈಪ್‌ಲೈನ್ ಅಳವಡಿಸಲಾಗಿದೆ. 120 ಕಿ.ಮೀ . ಉದ್ದದ ಪ್ರತ್ಯೇಕ ಬೈಸಿಕಲ್ ಪಾಥ್ ಹಾಗೂ ಪಾದಚಾರಿ ಮಾರ್ಗವನ್ನೂ ವಿನ್ಯಾಸಗೊಳಿಸಲಾಗಿದೆ. ಆದರೆ ಬೈಸಿಕಲ್ ಪಾಥ್ ಜನ ಬಳಕೆಗೆ ಸಿಕ್ಕಿಲ್ಲ. ಜಲಮಂಡಳಿಯಿಂದ ರಸ್ತೆಗಳ ನಡುವೆ ಗುಂಡಿ ಅಗೆದು ಅರ್ಧದಲ್ಲಿಯೇ ಬಿಡಲಾಗುತ್ತಿದೆ. ಇದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

'ಮಹಾನಗರ ಪಾಲಿಕೆಗೆ ಹಸ್ತಾಂತರ ಪ್ರಕ್ರಿಯೆ ನಡೆದಿದೆ. ಸ್ಮಾರ್ಟ್‌ಸಿಟಿಯಿಂದ ಕಾಮಗಾರಿಗಳು ಪೂರ್ಣಗೊಂಡಿಲ್ಲ. ಆದ್ದರಿಂದ ಕೇಂದ್ರದ ವಸತಿ ಸಚಿವಾಲಯದೊಂದಿಗೆ ಏಪ್ರಿಲ್ 7 ರಂದು ಸಭೆ ನಡೆಯಲಿದೆ. ಸಭೆಯಲ್ಲಿ ಇನ್ನೂ ಒಂದು ತಿಂಗಳು ಹಸ್ತಾಂತರ ಪ್ರಕ್ರಿಯೆಯನ್ನು ಮುಂದೂಡುವ ಬಗ್ಗೆ ಚರ್ಚೆ ನಡೆಯಲಿದೆ. ಕಾಮಗಾರಿ ಪೂರ್ಣ ಗೊಳಿಸಲು ಸಲಹೆ ಸೂಚನೆ ಪಡೆಯಲಾಗುವುದು' ಎಂದು ಸ್ಮಾರ್ಟ್‌ಸಿಟಿಯೋಜನೆಯ ವ್ಯವಸ್ಥಾಪಕ ನಿರ್ದೇಶಕಿ ಕವಿತಾ ಯೋಗಪ್ಪನವರ್ ತಿಳಿಸಿದರು.




Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**